ಸಂಪುಟ : 10 ಸಂಚಿಕೆ: 225 ಪುಟ : 4+2 ಬೆಲೆ: 3.00 ಶುಕ್ರವಾರ ಅಕ್ಟೋಬರ್ 17 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 225 Pages : 4+2 Price : 3.00 Friday October 17 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕನ್ನಡ ರಾಜ್ಯೋತ್ಸವ ಆಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

# ಕನ್ನಡ ರಾಜ್ಯೋತ್ಸವವನ್ನು ವ್ಯವಸ್ಥಿತವಾಗಿ ಆಚರಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನವೆಂಬರ್ 1ರಂದು ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ, ಸಂಭ್ರಮದಿಂದ ಆಚರಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಕನ್ನಡ ರಾಜ್ಯೋತ್ಸವ ಅಚರಣೆಯ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಯಾವುದೇ ಲೋಪಗಳಿಲ್ಲದಂತೆ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಯವರು ತಮಗೆ ವಹಿಸಿದ ಕೆಲಸವನ್ನು ನಿರ್ವಹಿಸಿ ರಾಜ್ಯೋತ್ಸವ ಕಾರ್ಯಕ್ರಮ ಯಶಸ್ವಿಗೆ ಶ್ರಮಿಸಬೇಕೆಂದು ಸೂಚಿಸಿದರು.

ಪ್ರತಿ ವರ್ಷದಂತೆ ಈ ವರ್ಷವೂ ಸಹ ಕನ್ನಡ ರಾಜ್ಯೋತ್ಸವದ ಹಿಂದಿನ ದಿನ ಹಾಗೂ ಕನ್ನಡ ರಾಜ್ಯೋತ್ಸವದ ದಿನ ಎರಡು ದಿನ ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು. ಅಂದು ಬೆಳಿಗ್ಗೆ 7.30ಕ್ಕೆ ಗದಗ-ಬೆಟಗೇರಿ ನಗರಸಭೆ ಪದವಿಪೂರ್ವ ಕಾಲೇಜು ಆವರಣದಿಂದ ತಾಯಿ ಭುವನೇಶ್ವರಿಯ ಮೆರವಣಿಗೆಯು ವಿವಿಧ ವೃತ್ತಗಳಲ್ಲಿ ಸಂಚರಿಸಿ ನಂತರ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ತಲುಪಲಿದೆ. ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸುವರು. ಕಾರ್ಯಕ್ರಮಕ್ಕೆ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ, ಕಡ್ಡಾಯವಾಗಿ ಹಾಜರಿರಬೇಕು ಎಂದರು.



ಪೊಲೀಸ್ ಪಡೆ, ಹೋಮ್‌ಗಾರ್ಡ್, ಭಾರತ ಸೇವಾ ದಳಗಳಿಂದ ಪರೇಡ್, ಪಥ ಸಂಚಲನ ಜರುಗಲಿವೆ. ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನಡೆಯುವಂತೆ ಕ್ರಮ ವಹಿಸಬೇಕು. ಶಿಷ್ಟಾಚಾರದನ್ವಯ ಆಸನದ ವ್ಯವಸ್ಥೆಗೆ ಕ್ರಮ ವಹಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸಂಘ-ಸಂಸ್ಥೆಯವರು ಈ ಕಾರ್ಯಕ್ರಮದಲ್ಲಿ ಆಸಕ್ತಿಯಿಂದ ಭಾಗವಹಿಸುವಂತೆ ಪ್ರೇರೇಪಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಸಭೆಯಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ. ನಂದಾ ಹಣಬರಟ್ಟಿ, ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಯುವಜನ ಮತ್ತು ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಮಾತನಾಡಿ, ಕಾರ್ಯಕ್ರಮದ ಸ್ಥಳದ ಸ್ವಚ್ಛತೆ ಹಾಗೂ ಅತಿಥಿಗಳಿಗೆ ಆಸನದ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಕ್ರಮ ಕೈಗೊಳ್ಳಬೇಕು. ಶಿಷ್ಟಾಚಾರದನ್ವಯ ಗಣ್ಯರ ಅಹ್ವಾನ ಹಾಗೂ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು.
>
> ವಿವಿಧ ರಂಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಪರಿಣಿತರಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸುವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ನಿರ್ದೇಶನ ನೀಡಿದರು.

## ಪೂರ್ವಭಾವಿ ಸಭೆ ಇಂದು

**ವಿಜಯಸಾಕ್ಷಿ ಸುದ್ದಿ, ಗದಗ**

ವೀರರಾಣಿ ಕಿತ್ತೂರ ಚನ್ನಮ್ಮ ಜಯಂತ್ಯುತ್ಸವದ ಪೂರ್ವಭಾವಿ ಸಭೆಯನ್ನು ಅ. 17ರಂದು ಮಧ್ಯಾಹ್ನ 4 ಗಂಟೆಗೆ ನಗರದ ಸಂಭಾಪೂರ ರಸ್ತೆಯಲ್ಲಿರುವ ಎಸ್.ಬಿ. ಸಂಕಣ್ಣವರ ಮಿಲ್‌ನಲ್ಲಿ ಕರೆಯಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಗೌರವಾಧ್ಯಕ್ಷರಾದ ಬಸವಣ್ಣೆಪ್ಪ ಚಿಂಚಲಿ ವಹಿಸುವರು. ಶಾಂತಣ್ಣ ಮಾಳವಾಡ, 2025-26ನೇ ಸಾಲಿನ ವಿಜಯೋತ್ಸವ ಸಮಿತಿ ಅಧ್ಯಕ್ಷ ಎಂ.ಎಸ್. ಕರಿಗೌಡರ, ಉಪಾಧ್ಯಕ್ಷ ಎಫ್.ವಿ. ಮರಿಗೌಡರ, ಸಿದ್ದು ಜೀವನಗೌಡರ, ಈರಣ್ಣ ಕರಿಬಿಷ್ಠಿ, ಅಯ್ಯಪ್ಪ ಅಂಗಡಿ, ಶೇಖಣ್ಣ ಕನ್ಯಾಳ, ಬಿಳೆಯಲಿ, ಕಿರಣ ಕಮತರ, ಮಂಜುನಾಥ ಗುಡದೂರ, ಸಿ.ಎಮ್. ಮಾಳಗಿ ಪಾಲ್ಗೊಳ್ಳುವರು. ಯುವ ಘಟಕದ ವಿಜಯೋತ್ಸವ ಸಮಿತಿ ಅಧ್ಯಕ್ಷರ ಆಯ್ಕೆ ಮಾಡುವುದು, ಮಹಿಳಾ ಘಟಕದ ಅಧ್ಯಕ್ಷರ ಆಯ್ಕೆ ಮಾಡುವುದು ಮತ್ತು ವಿಜಯೋತ್ಸವ ಸಮಿತಿ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗುವುದು.

ಪಂಚಮಸಾಲಿ ಸಮಾಜಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಲಹೆ-ಸೂಚನೆ ನೀಡಬೇಕೆಂದು ಮಹೇಶ ಕರಿಬಿಷ್ಠಿ (ಗದಗಿನ) ಪ್ರತಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

ಗದಗ ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆಯಲ್ಲಿ ಲಕ್ಷ್ಮೇಶ್ವರ ಪುರಸಭಾ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಹಿರಿಯ ಸದಸ್ಯ ರಾಜೀವ ಕುಂಬಿ ಚುನಾಯಿತರಾಗಿದ್ದು, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರಿಂದ ಪ್ರಮಾಣಪತ್ರ ಸ್ವೀಕರಿಸಿದರು.



### ಸಿದ್ಧಶ್ರೀ ಸರ್ವಧರ್ಮ ಸಮುದಾಯ ಭವನ ಕಟ್ಟಡಕ್ಕೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಗದಗ ಜಿಲ್ಲೆ ಸೌಹಾರ್ದತೆಯ ತವರೂರು

**ವಿಜಯಸಾಕ್ಷಿ ಸುದ್ದಿ, ರೋಣ**

ಗದಗ ಜಿಲ್ಲೆ ಸೌಹಾರ್ದತೆಯ ತವರೂರು. ಜಿಲ್ಲೆಯ ಎಲ್ಲ ಮಠಾಧೀಶರು, ಧಾರ್ಮಿಕ ಚಿಂತಕರು ಸರ್ವ ಜನಾಂಗದ ಏಕತೆಗೆ ತಮ್ಮ ಮೌಲ್ಯಯುತ ಕೊಡುಗೆಗಳನ್ನು ಕೊಟ್ಟು ಜಿಲ್ಲೆಯನ್ನು ದೇಶದಲ್ಲಿಯೇ ಮಾದರಿಯಾಗಿಸಿದ್ದಾರೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಮಾರನಬಸರಿ ಗ್ರಾಮದಲ್ಲಿ ಬುಧವಾರ ರಾತ್ರಿ ಜರುಗಿದ ಸಿದ್ಧಶ್ರೀ ಸರ್ವಧರ್ಮ ಸಮುದಾಯ ಭವನ ಕಟ್ಟಡಕ್ಕೆ ಭೂಮಿಪೂಜಾ ಕಾರ್ಯವನ್ನು ನೆರವೇರಿಸಿ ಮಾತನಾಡಿದರು.

ಮಾರನಬಸರಿ ಗ್ರಾಮದ ಜನರು ಸಹೋದರತೆಗೆ ಮತ್ತು ಸೌಹಾರ್ದತೆಗೆ ಹೆಸರಾದವರು. ಗ್ರಾಮದ ಜನರು ಎಲ್ಲ ಹಬ್ಬಗಳನ್ನು ಏಕತೆಯಿಂದ ಆಚರಣೆ ಮಾಡುತ್ತಾ ಬಂದಿರುವುದು ಹೆಮ್ಮೆಯ ಸಂಗತಿ. ಗ್ರಾಮದ ಏಕತೆಗೆ ಸಿದ್ದನಕೊಳ್ಳದ ಸಿದ್ದಯ್ಯಜ್ಜನವ ಕೊಡುಗೆ ಅಪಾರವಾಗಿದೆ. ಕಾರಣ ಸಿದ್ದಯ್ಯಜ್ಜನವರು ಹಾಗೂ ಇಲಕಲ್ ದರ್ಗಾದ ಅಜ್ಜನವರು ಆತ್ಮೀಯರು ಎನ್ನುವುದು ಸ್ಮರಣೀಯ ಎಂದರು.



ಗ್ರಾಮದಲ್ಲಿ ಈಗಾಗಲೇ 70 ಲಕ್ಷ ರೂ ವೆಚ್ಚದ ಸಿಸಿ ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ. ಈಗ ಮತ್ತೆ ಗ್ರಾಮದಲ್ಲಿರುವ ಬೃಹತ್ ಕೆರೆಯನ್ನು ಮಲಪ್ರಭಾ ನದಿಯ ಮೂಲಕ ನಿರು ತುಂಬಿಸುವ ಕಾರ್ಯಕ್ಕೆ ಶೀಘ್ರವೇ ಚಾಲನೆ ನೀಡಲಾಗುವುದು. 40 ಲಕ್ಷ ರೂ ವೆಚ್ಚದಲ್ಲಿ ಜಕ್ಕಲಿ ರಸ್ತೆಯ ಸೇತುವೆಯಿಂದ ಸಂಗೊಳ್ಳಿ ರಾಯಣ್ಣ ವೃತ್ತದವರೆಗೆ ಸಿಸಿ ರಸ್ತೆ, ಗ್ರಾಮದೇವತೆಯ ಸಮುದಾಯ ಭವನ ನಿರ್ಮಾಣ, ರೇವಣ ಸಿದ್ದೇಶ್ವರ ಸಮುದಾಯ ಭವನಕ್ಕೆ 15 ಲಕ್ಷ ರೂ, ಅಲ್ಪಸಂಖ್ಯಾತ ಕಾಲೋನಿಗಳ ಅಭಿವೃದ್ಧಿಗೆ 20 ಲಕ್ಷ ರೂಗಳ ಅನುದಾನ ಬಿಡುಗಡೆಯಾಗಿದೆ ಎಂದರು. ಸಾನ್ನಿಧ್ಯವನ್ನು ಶಿವಮೂರ್ತಿ ಮುರುಘರಾಜೇಂದ್ರ ಶ್ರೀಗಳು, ನೇತೃತ್ವವನ್ನು ಸಿದ್ದನಕೊಳ್ಳದ ಡಾ. ಶಿವಕುಮಾರ ಶ್ರೀಗಳು, ಅಧ್ಯಕ್ಷತೆಯನ್ನು ಅಂದಪ್ಪ ಮರಡಿ ವಹಿಸಿದ್ದರು. ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಶರಣಪ್ಪ ಬೆಟಗೇರಿ, ವ್ಹಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಜಿ.ಪಂ ಮಾಜಿ ಸದಸ್ಯ ಎಸ್. ಎಚ್. ಹಾದಿಮನಿ, ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ, ಎಂ.ಎಸ್. ಧಡೆಸೂರಮಠ, ಮರ್ತುಜಸಾಬ ಮೋತೆಖಾನ್, ಅಡಿವೆಪ್ಪ ಜಿಗಳೂರ, ಉಮೇಶ ಮೇಟಿ, ಹನಮಂತಪ್ಪ ಅಬ್ಬಿಗೇರಿ, ಅಯ್ಯನಗೌಡ ಪಾಟೀಲ, ಶಂಕ್ರಪ್ಪ ಸರ್ವಿ, ಈರಪ್ಪ ನಿಡಗುಂದಿ, ಶಿವಲಿಂಗಪ್ಪ ದಿಂಡೂರ, ಶರಣಪ್ಪ ಮ್ಯಾಗೇರಿ ಸೇರಿದಂತೆ ಗ್ರಾ.ಪಂ ಅಧ್ಯಕ್ಷ, ಉಪಾಧ್ಯಕ್ಷರು, ಸರ್ವ ಸದಸ್ಯರು ಉಪಸ್ಥಿತರಿದ್ದರು.

> ನಮ್ಮ ಕನ್ನಡ ನಾಡು ಎಂದಿಗೂ ಜನರಲ್ಲಿ ಬೇಧ-ಭಾವ ಕಲಿಸಿಲ್ಲ. ನಮ್ಮ ನಾಡಿನ ಸಾಧು ಸಂತರು, ಸೂಫಿಗಳು, ಮಠಾಧೀಶರು ಜನರಲ್ಲಿ ಏಕತೆಯನ್ನು ಬಿತ್ತುವ ಕೆಲಸ ಮಾಡಿದ್ದಾರೆ. ಮಠಾಧೀಶರು ಅನ್ನದಾಸೋಹದ ಜೊತೆಗೆ ಅಕ್ಷರ ಜ್ಞಾನವನ್ನು ಎಲ್ಲ ವರ್ಗದ ಜನರಿಗೂ ಮಾಡಿದರು. ಇದು ನಮ್ಮ ನೆಲದ ಭವ್ಯ ಸಂಸ್ಕೃತಿಯಾಗಿದೆ.
>
> **– ಶಿವಮೂರ್ತಿ ಮುರುಘರಾಜೇಂದ್ರ ಶ್ರೀಗಳು.**
> ಸರ್ವಧರ್ಮ ಸಮನನ್ವಯ ಪೀಠ, ಮಾರನಬಸರಿ.

> ಸಿದ್ದಶ್ರೀ ಸರ್ವಧರ್ಮ ಸಮುದಾಯ ಭವನ ನಿರ್ಮಾಣದ ಕಾರ್ಯ ಸಂಪೂರ್ಣ ನನ್ನ ಜವಾಬ್ದಾರಿಯಾಗಿದೆ.ಇಲ್ಲಿ ಅನುದಾನ ಬಗ್ಗೆ ಸಂಶಯಬೇಡ ಎಲ್ಲ ಕಾರ್ಯವನ್ನು ಮುಗಿಸಿ ಶ್ರೀಮಠದ ಸುಪರ್ದಿಗೆ ವಹಿಸುತ್ತೇನೆ.
>
> **–ಜಿ.ಎಸ್.ಪಾಟೀಲ.ಶಾಸಕರು,** ರೋಣ

## 'ಪಲ್ಲಕ್ಕಿ' ಬಸ್ ಸಂಚಾರ ಇಂದಿನಿಂದ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗದಗ-ಬೆಂಗಳೂರು ಮಾರ್ಗವಾಗಿ ಅ.17ರಿಂದ ಕೆಎಸ್‌ಆರ್‌ಟಿಸಿಯಿಂದ 'ಪಲ್ಲಕ್ಕಿ' ನಾನ್-ಎಸಿ ಸ್ಲೀಪರ್ ಬಸ್ ಸಂಚಾರ ಪ್ರಾರಂಭಗೊಳ್ಳಲಿದ್ದು, ಶಿರಹಟ್ಟಿ, ಲಕ್ಷ್ಮೇಶ್ವರ ಭಾಗದ ಜನರಿಗೆ ದೀಪಾವಳಿ ಉಡುಗೊರೆಯಾದಂತಾಗಿದೆ.

ಶಿರಹಟ್ಟಿ, ಲಕ್ಷ್ಮೇಶ್ವರ ತಾಲೂಕಿನ ಜನರು ಬೆಂಗಳೂರಿಗೆ ಹೋಗಲು ಕೆಎಸ್‌ಆರ್‌ಟಿಸಿ ಸ್ಲೀಪರ್ ಬಸ್ಸಿನ ವ್ಯವಸ್ಥೆ ಇಲ್ಲದ್ದರಿಂದ ಅನಿವಾರ್ಯವಾಗಿ ಖಾಸಗಿ ಬಸ್ಸಿನ ಮೊರೆ ಹೋಗಬೇಕಾಗಿತ್ತು. ಅಲ್ಲದೇ ಬಸ್ಸಿನ ವ್ಯವಸ್ಥೆಯೂ ಸಮರ್ಪಕವಾಗಿಲ್ಲದ್ದರಿಂದ ಜನರು ಸಮಸ್ಯೆ ಅನುಭವಸುತ್ತಿದ್ದರು. ಆದ್ದರಿಂದ ಗದಗದಿಂದ ಶಿರಹಟ್ಟಿ, ಮಾಗಡಿ, ಲಕ್ಷ್ಮೇಶ್ವರ, ಸವಣೂರ, ಹಾವೇರಿ ಮಾರ್ಗವಾಗಿ ಕೆಎಸ್‌ಆರ್‌ಟಿಸಿಯಿಂದ 'ಪಲ್ಲಕ್ಕಿ' ನಾನ್-ಎಸಿ ಸ್ಲೀಪರ್ ಬಸ್ ಸೇವೆ ಆರಂಭಿಸುವಂತೆ ಇತ್ತೀಚೆಗೆ ಶಾಸಕ ಡಾ. ಚಂದ್ರು ಲಮಾಣಿ ಅವರು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಮನವಿ ಸಲ್ಲಿಸಿ ಸಚಿವರೊಂದಿಗೆ ನಿರಂತರ ಸಂಪರ್ಕದಲ್ಲಿದ್ದರು. ಶಾಸಕರ ಪ್ರಯತ್ನದ ಅ.17ರಿಂದ ಪ್ರತಿದಿನ ರಾತ್ರಿ 10 ಗಂಟೆಗೆ ಗದುಗಿನಿಂದ ಮತ್ತು ಇದೇ ಸಮಯಕ್ಕೆ ಬೆಂಗಳೂರಿನಿಂದ ಪಲ್ಲಕ್ಕಿ ಬಸ್ ಪ್ರಾರಂಭಗೊಳ್ಳುತ್ತಿದೆ.

ಈ ಕುರಿತು ಪ್ರತಿಕ್ರಿಯಿಸಿದ ಶಾಸಕ ಡಾ. ಚಂದ್ರು ಲಮಾಣಿ, ಕ್ಷೇತ್ರದ ಜನರ ಸಂಚಾರದ ಅನಕೂಲತೆಗಾಗಿ ಗದಗ- ಬೆಂಗಳೂರು ಮಾರ್ಗದಲ್ಲಿ ಕಲ್ಯಾಣ ರಥ ಅಥವಾ ಪಲ್ಲಕ್ಕಿ ಬಸ್ಸಿನ ವ್ಯವಸ್ಥೆ ಕಲ್ಪಿಸಬೇಕು. ಅಲ್ಲದೇ ಗದಗದಿಂದ ಶಿರಹಟ್ಟಿ, ಮಾಗಡಿ, ಲಕ್ಷ್ಮೇಶ್ವರ ಮಾರ್ಗವಾಗಿ ಸಂಚರಿಸುವಂತಾಗಬೇಕು ಎಂದು ಮನವಿ ಮಾಡಿದ್ದೆ. ಸದ್ಯಕ್ಕೆ ಶಿರಹಟ್ಟಿ ಮಾರ್ಗವಾಗಿ ಪ್ರಾರಂಭಗೊಂಡಿದ್ದು, ಮುಂದಿನ ದಿನಗಳಲ್ಲಿ ಮಾಗಡಿ-ಲಕ್ಷ್ಮೇಶ್ವರ ಮೂಲಕ ಸಂಚರಿಸುವಂತೆ ಕೋರಲಾಗುವುದು. ಸಚಿವರ ಸಕಾರಾತ್ಮಕ ಸ್ಪಂದನೆಗೆ ಧನ್ಯವಾದಗಳು ಎಂದರು.

### ಜಿಲ್ಲಾಡಳಿತದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಪೂರ್ವಸಿದ್ಧತಾ ಸಭೆ

# ಕಿತ್ತೂರು ಚನ್ನಮ್ಮ ಎಲ್ಲ ಸಮುದಾಯದವರಿಗೂ ಮಾದರಿ

**ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ವೀರರಾಣಿ ಕಿತ್ತೂರು ಚನ್ನಮ್ಮ ಜಯಂತಿಯನ್ನು ಜಿಲ್ಲೆಯಲ್ಲಿ ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಗುರುವಾರ ನಡೆದ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತದಿಂದ ಅಕ್ಟೋಬರ್ 23ರಂದು ನಗರದ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಬೆಳಿಗ್ಗೆ 11 ಗಂಟೆಗೆ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ವೀರರಾಣಿ ಕಿತ್ತೂರು ಚನ್ನಮ್ಮನವರ ಗೌರವಾರ್ಥವಾಗಿ ಪ್ರತಿ ವರ್ಷ ಅಕ್ಟೋಬರ್ 23, 24 ಹಾಗೂ 25ರಂದು ಕಿತ್ತೂರಿನ ಕೋಟೆ ಆವರಣದಲ್ಲಿ ಕಿತ್ತೂರು ಉತ್ಸವವನ್ನು ಆಚರಿಸಲಾಗುತ್ತಿದೆ. ಉತ್ಸವದ ಪೂರ್ವಭಾವಿಯಾಗಿ ಈಗಾಗಲೇ ವಿಜಯಜ್ಯೋತಿ ಯಾತ್ರೆಯು ರಾಜ್ಯದ ವಿವಿಧ ಜಿಲ್ಲೆಗಳಿಗೆ ಸಂಚರಿಸುತ್ತಿದ್ದು, ಗದಗ ಜಿಲ್ಲೆಗೆ ಅಕ್ಟೋಬರ್ 14ರಂದು ಆಗಮಿಸಿದ್ದು ನಮಗೆಲ್ಲ ಅತ್ಯಂತ ಹೆಮ್ಮೆಯ ವಿಷಯವಾಗಿದೆ ಎಂದು ಪ್ರಶಂಸಿಸಿದರು.



ಜಿಲ್ಲೆಯ ಎಲ್ಲ ತಾಲೂಕು, ಗ್ರಾ.ಪಂಗಳಲ್ಲಿ, ಶಾಲಾ-ಕಾಲೇಜುಗಳಲ್ಲಿಯೂ ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಆಚರಿಸಲು ಕ್ರಮ ವಹಿಸಬೇಕು. ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ಧ ಹೋರಾಡಿದ ವೀರರಾಣಿ ಕಿತ್ತೂರು ಚನ್ನಮ್ಮ ದೇಶದ ಎಲ್ಲ ಸಮುದಾಯದವರಿಗೂ ಮಾದರಿಯಾಗಿದ್ದಾರೆ. ಜಯಂತಿ ಕಾರ್ಯಕ್ರಮದ ಆಚರಣೆಯಲ್ಲಿ ಹಬ್ಬದ ವಾತಾವರಣವಿರಬೇಕು ಹಾಗೂ ಯಾವುದೇ ಲೋಪ-ದೋಷಗಳಾಗದಂತೆ ಕ್ರಮ ವಹಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಜಯಂತಿ ಕಾರ್ಯಕ್ರಮದಲ್ಲಿ ಸಾರ್ವಜನಿಕರು, ದೇಶಭಕ್ತರು ಪಾಲ್ಗೊಳ್ಳುವಂತಾಗಬೇಕು ಎಂದು ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ವಿಶೇಷ ಉಪನ್ಯಾಸ, ವೇದಿಕೆ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ, ಬ್ಯಾನರ್ ಅಳವಡಿಕೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸಭೆಯಲ್ಲಿ ಪಂಚಮಸಾಲಿ ಸಮಾಜದ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವಸದಸ್ಯರು, ಮುಖಂಡರು, ಮಹಿಳಾ ಪ್ರತಿನಿಧಿಗಳು, ಹಿರಿಯರು, ಗಣ್ಯರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಮಾತನಾಡಿ, ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಲಾಗುವುದು. ಎಸ್.ಎಸ್.ಎಲ್.ಸಿ, ಪಿಯುಸಿ ಹಾಗೂ ಪದವಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮುದಾಯದ ವಿದ್ಯಾರ್ಥಿಗಳನ್ನು ಜಯಂತಿ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು ಎಂದರು.

## ಒಳ ಮೀಸಲಾತಿ ಪ್ರಕರಣ : ಸರ್ಕಾರದ ಪರವಾದ ಮಂಡಿಸಲು ಉದಯ್ ಹೊಳ್ಳ ನೇಮಕ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಒಳ ಮೀಸಲಾತಿ ಪ್ರಕರಣದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪರ ವಾದ ಮಂಡಿಸಲು ಬಿಜೆಪಿ ಸರ್ಕಾರದಲ್ಲಿ ಅಡ್ವೋಕೇಟ್ ಜನರಲ್ ಆಗಿದ್ದ ಹಿರಿಯ ವಕೀಲ ಉದಯ್ ಹೊಳ್ಳ ಅವರನ್ನು ನೇಮಿಸಲಾಗಿದೆ.

ಆಗಸ್ಟ್ 26ರಂದು ಸರ್ಕಾರ ಹೊರಡಿಸಿರುವ ಒಳ ಮೀಸಲಾತಿ ಆದೇಶದ ವಿರುದ್ಧ ಕರ್ನಾಟಕ ಅಸ್ಪೃಶ್ಯ ಅಲೆಮಾರಿ ಸಮುದಾಯಗಳ ಒಕ್ಕೂಟ ಮತ್ತು ಇತರರು ಹೈಕೋರ್ಟ್ ಮೆಟ್ಟಿಲೇರಿದ್ದಾರೆ.

ಈ ಪ್ರಕರಣದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪರ ಅಥವಾ ಸರ್ಕಾರದ ಪರ ವಾದ ಮಂಡಿಸಲು ಉದಯ್ ಹೊಳ್ಳ ಅವರನ್ನು ನೇಮಿಸಿ ಅಕ್ಟೋಬರ್ 15ರಂದು ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಜಂಟಿ ಕಾರ್ಯದರ್ಶಿ ಕಲಾವತಿ ಎಸ್.ವಿ ಆದೇಶಿಸಿದ್ದಾರೆ.

ಆಗಸ್ಟ್ 19ರಂದು ಒಳ ಮೀಸಲಾತಿ ವರದಿಯನ್ನು ಸರ್ಕಾರ ಒಪ್ಪಿಕೊಂಡಿತ್ತು. ಆದರೆ, ನಾಗಮೋಹನ್ ದಾಸ್ ವರದಿಗೆ ವ್ಯತಿರಿಕ್ತವಾಗಿ ಬಲಗೈಗೆ ಶೇಕಡ 6, ಎಡಗೈಗೆ ಶೇಕಡ 6 ಮತ್ತು ಕೊಲಂಬೋ, ಅಲೆಮಾರಿಗಳಿಗೆ ಶೇಕಡ 5 ಮೀಸಲಾತಿಯನ್ನು ನಿಗದಿ ಮಾಡಿದೆ.

ನಾಗಮೋಹನ್‌ದಾಸ್ ವರದಿಯಲ್ಲಿ ಅಲೆಮಾರಿಗಳಿಗೆ ಶೇಕಡ 1ರಷ್ಟು ಪ್ರತ್ಯೇಕ ಮೀಸಲಾತಿಯನ್ನು ಪ್ರಸ್ತಾಪಿಸಲಾಗಿತ್ತು. ಆದರೆ, ಸರ್ಕಾರ ಅದನ್ನು ಕೊಲಂಬೋಗಳ ಶೇಕಡ 5ರ ಜೊತೆ ಸೇರಿಸಿದೆ. ಸರ್ಕಾರದ ಈ ನಿರ್ಧಾರದ ವಿರುದ್ಧ ಬೆಂಗಳೂರು ಸೇರಿದಂತೆ ರಾಜ್ಯದ ವಿವಿದೆಡೆ ದೊಡ್ಡ ಮಟ್ಟದ ಹೋರಾಟಗಳು ನಡೆದಿವೆ. ಪ್ರಸ್ತುತ ಹೋರಾಟ ರಾಷ್ಟ್ರ ರಾಜಧಾನಿ ದೆಹಲಿ ತಲುಪಿದೆ. ಹೋರಾಟಗಾರರು ಕಾಂಗ್ರೆಸ್ ಹೈಕಮಾಂಡ್ ಮೇಲೆ ಒತ್ತಡ ಹಾಕುವ ಪ್ರಯತ್ನ ಮಾಡುತ್ತಿದ್ದಾರೆ.

ಈ ನಡುವೆ ಅಲೆಮಾರಿಗಳ ಪ್ರತ್ಯೇಕ ಮೀಸಲಾತಿ ವಿಚಾರ ಹೈಕೋರ್ಟ್ ಮೆಟ್ಟಿಲೇರಿದೆ. ಹಾಗಾಗಿ, ಪ್ರಕರಣದಲ್ಲಿ ಸಮಾಜ ಕಲ್ಯಾಣ ಇಲಾಖೆ ಪರ ವಾದ ಮಂಡಿಸಲು ಸರ್ಕಾರ ಉದಯ್ ಹೊಳ್ಳ ಅವರನ್ನು ನೇಮಿಸಿದೆ.

## ಬೆಂಗಳೂರಿನಲ್ಲಿ ಹಾಡಹಗಲೇ ವಿದ್ಯಾರ್ಥಿನಿಯ ಬರ್ಬರ ಕೊಲೆ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿದ್ಯಾರ್ಥಿನಿಯೊಬ್ಬಳನ್ನು ದುಷ್ಕರ್ಮಿಗಳು ಹಾಡಹಗಲೇ ಕತ್ತು ಕೊಯ್ದು ಹತ್ಯೆ ಮಾಡಿದ ಘಟನೆ ಶ್ರೀರಾಮಪುರ ರೈಲ್ವೆ ಟ್ರ್ಯಾಕ್ ಬಳಿಯಲ್ಲಿ ನಡೆದಿದೆ.

ಪೊಲೀಸ್ ಮೂಲಗಳ ಪ್ರಕಾರ, ಯುವತಿಯ ವಯಸ್ಸು ಸುಮಾರು 20-22 ವರ್ಷಗಳಷ್ಟಿದ್ದು, ಕಾಲೇಜು ವಿದ್ಯಾರ್ಥಿನಿಯಾಗಿರಬಹುದು ಎಂದು ಶಂಕಿಸಲಾಗಿದೆ. ಗುರುತು ಪತ್ತೆ ಹಚ್ಚುವ ಕಾರ್ಯ ಪ್ರಗತಿಯಲ್ಲಿದೆ.

ಘಟನೆ ಬೆಳಗಿನ ಸಮಯದಲ್ಲಿ ನಡೆದಿದ್ದು, ಸ್ಥಳೀಯರು ಟ್ರ್ಯಾಕ್ ಹತ್ತಿರ ರಕ್ತದ ಮಡುವಿನಲ್ಲಿ ಯುವತಿಯ ಶವ ಪತ್ತೆಹಚ್ಚಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಶ್ರೀರಾಮಪುರ ಪೊಲೀಸ್ ಠಾಣೆ ಅಧಿಕಾರಿಗಳು ಸ್ಥಳಕ್ಕೆ ಬಂದು ಪರಿಶೀಲನೆ ನಡೆಸಿದ್ದು, ಶವವನ್ನು ಪೋಸ್ಟ್ ಮಾರ್ಟಂಗಾಗಿ ಆಸ್ಪತ್ರೆಗೆ ಕಳುಹಿಸಲಾಗಿದೆ.

## ಆಕ್ಷೇಪಣೆಗೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣ ಪಂಚಾಯತಿ ವ್ಯಾಪ್ತಿಯ ರಿ.ಸ ನಂಬರ 399 ಕ್ಷೇತ್ರ 4-ಎಕರೆ 0-ಗುಂಟೆ ಹಾಗೂ ರಿ. ನಂಬರ. 351/1, 351/2 6- ಎಕರೆ 32-ಗುಂಟೆ ಜಮೀನಿನಲ್ಲಿ ವಾಜಪೇಯಿ ನಗರ ನಿವೇಶನ ಯೋಜನೆಯಡಿ ನಿವೇಶನ ರಹಿತ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಲು ನಿವೇಶನ ರಹಿತರಿಂದ ಸ್ವೀಕೃತಗೊಂಡ ಅರ್ಜಿಗಳನ್ನು ನಗರ ಆಶ್ರಯ ಸಮಿತಿ ಸಭೆಯಲ್ಲಿ ಮಂಡಿಸಿ, ಪರಿಶಿಷ್ಟ ಜಾತಿ-55, ಪರಿಶಿಷ್ಟ ಪಂಗಡ-10, ವಿಕಲಚೇತನರು-12 ಹಾಗೂ ಸಾಮಾನ್ಯ ವರ್ಗ-294 ಪಲಾನುಭವಿಗಳ ತಾತ್ಕಾಲಿಕ ಪಟ್ಟಿಯನ್ನು ತಯಾರಿಸಲಾಗಿದೆ.

ತಾತ್ಕಾಲಿಕ ಫಲಾನುಭವಿಗಳ ಪಟ್ಟಿಯನ್ನು ಪಟ್ಟಣ ಪಂಚಾಯತ ಕಚೇರಿಯ ಸೂಚನಾ ಫಲಕಕ್ಕೆ ಹಾಗೂ ಕಚೇರಿ ವೆಬ್‌ಸೈಟ್‌ನಲ್ಲಿ www.mulagundatown.mrc.gov.in ನಲ್ಲಿ ಪ್ರಕಟಿಸಲಾಗಿದ್ದು, ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ ದಾಖಲೆ ಸಹಿತ ಲಿಖಿತವಾಗಿ 15 ದಿನದೊಳಗಾಗಿ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ್, ಮುಳಗುಂದ ಈ ವಿಳಾಸಕ್ಕೆ ಆಕ್ಷೇಪಣೆ ಸಲ್ಲಿಸತಕ್ಕದ್ದು, ಅಂದು ಆಕ್ಷೇಪಣೆ ಬಂದ ಫಲಾನುಭವಿಗಳನ್ನು ಹೊರತುಪಡಿಸಿ ನಿವೇಶನರಹಿತ ಫಲಾನುಭವಿಗಳ ಪಟ್ಟಿಯನ್ನು ನಗರ ಆಶ್ರಯ ಸಮಿತಿಯಲ್ಲಿ ಫಲಾನುಭವಿಗಳ ಆಯ್ಕೆ ಮಾಡಲು ಮಂಡಿಸಲಾಗುವುದು ಎಂದು ಮುಳಗುಂದ ಪಟ್ಟಣ ಪಂಚಾಯತ್, ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

### ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆ

# ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ




ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು 2025-26ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ್, ಭೌದ್ಧರು, ಸಿಖ್ಖರು, ಫಾರ್ಸಿ ಸಮುದಾಯದವರಿಗೆ ರಾಜ್ಯದಲ್ಲಿ ಕನಿಷ್ಠ 10 ವರ್ಷ ವಾಸವಾಗಿರುವ, 18ರಿಂದ 55 ವರ್ಷ ವಯೋಮಿತಿಯ ಆಸಕ್ತರಿಂದ ಈ ಕೆಳಗಿನ ಸಾಲದ ಯೋಜನೆಗಳಿಗೆ ಸಾಲ ಸೌಲಭ್ಯಒದಗಿಸಲು ನಿಗಮದ ಅಂತರ್ಜಾಲ https://kmdconline.karnataka.gov.inರಲ್ಲಿ ಅರ್ಜಿಗಳನ್ನು ಅಹ್ವಾನಿಸಿದ್ದು, ಅರ್ಜಿ ಸಲ್ಲಿಸುವ ದಿನಾಂಕವನ್ನು ಅಕ್ಟೋಬರ್ 21ರವರೆಗೆ ವಿಸ್ತರಿಸಿದೆ.

**ಶ್ರಮಶಕ್ತಿ ಸಾಲ ಯೋಜನೆ:** ಈ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತ ವರ್ಗದ ಕುಲಕಸಬುದಾರರು, ತಮ್ಮ ಸಾಂಪ್ರದಾಯಿಕ ಮಾರುಕಟ್ಟೆ ಹಾಗೂ ವೃತ್ತಿ ಕೌಶಲ್ಯತೆಗೆ ಅನುಗುಣವಾಗಿ ಅಭಿವೃಧಿಗೊಳಿಸುವ ಸಲುವಾಗಿ ನಿಗಮದಿಂದ ಶೇ. 4ರ ಬಡ್ಡಿ ದರದಲ್ಲಿ ರೂ 50,000ವರೆಗೆ ಸಾಲ ಸೌಲಭ್ಯವನ್ನು ಕಲ್ಪಿಸಲಾಗುತ್ತದೆ. ಈ ಯೋಜನೆಯಲ್ಲಿ ಶೇ.50ರಷ್ಟು ಸಾಲವನ್ನು 36 ತಿಂಗಳನಲ್ಲಿ ಫಲಾನುಭವಿಯು ಮುರುಪಾವತಿ ಮಾಡಿದಲ್ಲಿ, ಉಳಿದ ಶೇ. 50ರಷ್ಟು ಹಣವನ್ನು 'ಬ್ಯಾಕ್‌ಎಂಡ್ ಸಹಾಯಧನವನ್ನಾಗಿ ಪರಿಗಣಿಸಲಾಗುತ್ತದೆ. ಫಲಾನುಭವಿಯು ತಾನು ಪಡೆದ ಸಾಲವನ್ನು 36 ತಿಂಗಳೊಳಗಾಗಿ ಮರುಪಾವತಿ ಮಾಡಲು ವಿಫರರಾದಲ್ಲಿ ಶೇ. 50ರಷ್ಟು ಬ್ಯಾಕ್‌ಎಂಡ್ ಸಹಾಯಧನವನ್ನು ಸಹ ಸಾಲವೆಂದು ಪರಿಗಣಿಸಲಾಗುತ್ತದೆ.

**ವೃತ್ತಿ ಪ್ರೋತ್ಸಾಹ ಯೋಜನೆ:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ವೃತ್ತಿ ಪ್ರೋತ್ಸಾಹ ಸಾಲ ಯೋಜನೆಯಡಿ ಒಟ್ಟು ರೂ.1 ಲಕ್ಷ ಸಾಲದೊಂದಿಗೆ ಇದರಲ್ಲಿ ಶೇ. 50 ಸಾಲ ಮತ್ತು ಶೇ. 50 ವಿವಿಧ ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು ಸಹಾಯಧನ ನೀಡಲಾಗುವುದು.

**ಸ್ವಾವಲಂಬಿ ಸಾರಥಿ ಯೋಜನೆ:** ಈ ಯೋಜನೆಯಡಿ ಬ್ಯಾಂಕುಗಳಿಂದ ಮಂಜೂರಾತಿ ಪಡೆದ ಟ್ಯಾಕ್ಸಿ/ಗೂಡ್ಸ್/ಪ್ಯಾಸೆಂಜರ್ ಆಟೋರಿಕ್ಷಾ ವಾಹನಗಳನ್ನು ಖರೀದಿಸಲು ಪ್ರತಿ ಫಲಾನುಭವಿಗೆ ವಾಹನದ ಮೌಲ್ಯದ ಶೇ. 50ರಷ್ಟು ಅಥವಾ ಗರಿಷ್ಠ ರೂ. 3 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತದೆ. ಪ್ಯಾಸೆಂಜರ್ ಆಟೋರಿಕ್ಷಾ ವಾಹನಕ್ಕೆ ಗರಿಷ್ಠ ರೂ,75000 ಸಹಾಯಧನ ನೀಡಲಾಗುತ್ತದೆ. ವಾಹನದ ಉಳಿದ ಮೊತ್ತಕ್ಕೆ ಬ್ಯಾಂಕ್ ಸಾಲ ಪಡೆದುಕೊಂಡ ಬಗ್ಗೆ ಬ್ಯಾಂಕ್ ಪತ್ರವನ್ನು ಸಲ್ಲಿಸಬೇಕು.

ಉನ್ನತ ಶಿಕ್ಷಣಕ್ಕಾಗಿ ಬಡ್ಡಿರಹಿತ ಸಾಲ ಯೋಜನೆ: ಈ ಯೋಜನೆಯು ವಿದೇಶದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಮಾಡಬಯಸುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಸಾಲವನ್ನು ನೀಡಲಾಗುವುದು.

**ರೇಷ್ಮೆ ನೂಲು ಬಿಚ್ಚಾಣಿಕೆ ಉದ್ಯಮಕ್ಕೆ ಪ್ರೋತ್ಸಾಹ:** ರೇಷ್ಮೆ ನೂಲು ಬಿಚ್ಚಾಣಿಕೆಯಲ್ಲಿ ತೊಡಗಿರುವ ಅಲ್ಪಸಂಖ್ಯಾತ ಫಲಾನುಭವಿಗಳನ್ನು ಪ್ರೋತ್ಸಾಹಿಸಿ ಅವರ ಆರ್ಥಿಕ ಸ್ಥಿತಿಯನ್ನು ಉತ್ತಮಪಡಿಸುವ ಸಲುವಾಗಿ ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ ದುಡಿಮೆ ಬಂಡವಾಳ (Working Capital) ಮತ್ತು ಮೂಲಭೂತ ಸೌಕರ್ಯವನ್ನು ಒದಗಿಸಲು ನಿಗಮದಿಂದ ರೂ.2 ಲಕ್ಷದವರೆಗೆ ಸಾಲ ಸಹಾಯಧನ ಒದಗಿಸಲಾಗುವುದು. ಇದರಲ್ಲಿ ಶೇ.50 ಸಹಾಯಧನವಾಗಿರುತ್ತದೆ.

ನೇರಸಾಲ ಯೋಜನೆ: ಈ ಯೋಜನೆಯಡಿಯಲ್ಲಿ ವ್ಯಾಪರ/ಉದ್ದಿಮೆ ಚಟುವಟಿಕೆ ಕೈಗೊಳ್ಳಲು ಬಯಸುವ ಫಲಾನುಭವಿಗಳಿಗೆ ಆಸ್ತಿಯ (ಕಟ್ಟಡ/ಭೂಮಿ) ಅಡಮಾನದ ಮೇಲೆ ಸಾಲವನ್ನು ಒದಗಿಸಲಾಗುವುದು. ವಯಸ್ಸು 18ರಿಂದ 5ದಗುವುದು. ಕುಟುಂಬದ ವಾರ್ಷಿಕ ಆದಾಯ ರೂ. 8-15 ಲಕ್ಷವರೆಗೆ ಇರುವ ಅರ್ಜಿದಾರರಿಗೆ ರೂ.20 ಲಕ್ಷದವರೆಗೆ ಶೇ. 6 ಬಡ್ಡಿ ದರದಲ್ಲಿ ಸಾಲ ನೀಡಲಾಗುವುದು.

ಅರ್ಹರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು 21-10-2025ರವರೆಗೆ ಅವಧಿ ವಿಸ್ತರಿಸಲಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿ ಹಾಗೂ ದಾಖಲಾತಿಗಳ ನಕಲು ಪ್ರತಿಯನ್ನು ಜಿಲ್ಲಾ ಕಛೇರಿಗೆ ಸಲ್ಲಿಸುವ ಅಗತ್ಯವಿರುವುದಿಲ್ಲ. ಜಿಲ್ಲಾ ಕಛೇರಿಯಲ್ಲಿ ಯಾವುದೇ ಅರ್ಜಿಗಳ ಜೊತೆ ದಾಖಲಾತಿಗಳನ್ನು ಸ್ವೀಕರಿಸುವುದಿಲ್ಲ.

ನಿಗಮದ ಅಂತರ್ಜಾಲ https://kmdconline.karnataka.gov.in ಆನ್‌ಲೈನ್ ಮೂಲಕವೇ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ-08372-295147 ಸಂಪರ್ಕಿಬಹುದಾಗಿದೆ.

### ಸಾಂತ್ವನ ಯೋಜನೆ

2025-26ನೇ ಸಾಲಿಗೆ ಅಲ್ಪಸಂಖ್ಯಾತ ಸಮುದಾಯದ ರಾಜ್ಯದಲ್ಲಿನ ವಿಶೇಷ ಹಾಗೂ ದುರ್ಬಲ ವರ್ಗದ ಫಲಾನುಭವಿಗಳಿಗೆ ಗರಿಷ್ಟ 5 ಲಕ್ಷ ರೂವರಗೆ ಘಟಕ ವೆಚ್ಚಕ್ಕೆ ಶೇ. 50ರಷ್ಟು ಸಹಾಯಧನ ಮತ್ತು ಶೇ.3ರ ಬಡ್ಡಿ ದರದಲ್ಲಿ ಶೇ. 50ರಷ್ಟು ಸಾಲವನ್ನು ನೀಡಲಾಗುವುದು. ರಾಜ್ಯದಲ್ಲಿ ಕೋಮು ಗಲಭೆ ಮತ್ತು ಕೋಮು ಹಿಂಸಾಚಾರದ ಸಂದರ್ಭಗಳಲ್ಲಿ ಹಾಗೂ ಪರಿಸರ ವಿಕೋಪಗಳಿಂದ ವ್ಯಾಪಾರ ಕೇಂದ್ರಗಳು ಹಾಗೂ ವಾಸದ ಮನೆಗಳು ನಾಶ ಅಥವಾ ಹಾನಿಗೊಳಗಾಗಿದ್ದರೆ ಅಂತಹ ಪ್ರಕರಣಗಳಲ್ಲಿ ಕನಿಷ್ಠ ರೂ.2 ಲಕ್ಷ ನಷ್ಟವಾಗಿದ್ದರೆ ಸಾಲ ಸೌಲಭ್ಯ ಒದಗಿಸಲಾಗುವುದು.

## ಸಚಿವ ಪ್ರಿಯಾಂಕ್ ಖರ್ಗೆಗೆ ಬೆದರಿಕೆ ಕರೆ : ಆರೋಪಿಯನ್ನು ಬಂಧಿಸಿದ ಪೊಲೀಸರು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಸರ್ಕಾರಿ ಸ್ಥಳಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳನ್ನು ನಿಷೇಧಿಸುವಂತೆ ಮುಖ್ಯಮಂತ್ರಿಗೆ ಪತ್ರ ಬರೆದ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಕರೆ ಮಾಡಿ ಬೆದರಿಕೆ ಹಾಕಿದಲ್ಲದೆ, ಅವಾಚ್ಯ ಶಬ್ಧಗಳಿಂದ ನಿಂದಿಸಿದ ಆರೋಪಿಯನ್ನು ಬೆಂಗಳೂರು ಮತ್ತು ಕಲಬುರಗಿ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಬಂಧಿಸಿದ್ದಾರೆ.

ಬೆದರಿಕೆ ಕರೆ ಸಂಬಂಧ ಸಚಿವ ಪ್ರಿಯಾಂಕ್ ಖರ್ಗೆ ಅವರ ಬದಲಿಗೆ ಕಾಂಗ್ರೆಸ್ ಮುಖಂಡ ಮನೋಹರ್ ಎನ್ನುವರು ಬೆಂಗಳೂರಿನ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಎಫ್‌ಐಆರ್ ದಾಖಲಿಸಿದ್ದ ಪೊಲೀಸರು, ಕರೆ ದಾಖಲೆಗಳ ಮೂಲಕ ಆರೋಪಿ ಮಹಾರಾಷ್ಟ್ರದ ಸೋಲಾಪುರದ 40 ವರ್ಷದ ದಾನಪ್ಪನನ್ನು ಪತ್ತೆ ಹಚ್ಚಿದ್ದು, ಲಾತೂರ್‌ನಲ್ಲಿ ಬಂಧಿಸಿದ್ದಾರೆ ಎಂದು ತಿಳಿದು ಬಂದಿದೆ. ಬಂಧಿತ ಎಫ್‌ಎಂಸಿಜಿ ಎಂಬ ಕಂಪನಿಯಲ್ಲಿ ಸೇಲ್ಸ್ ಎಕ್ಸಿಕ್ಯೂಟಿವ್ ಆಗಿ ಕೆಲಸ ಮಾಡುತ್ತಿದ್ದ ಎಂದು ವರದಿಗಳು ಹೇಳಿವೆ.

ಆರೋಪಿಯನ್ನು ಬೆಂಗಳೂರಿಗೆ ಕರೆ ತಂದಿರುವ ಪೊಲೀಸರು, ಆತನಿಗೆ ಸಚಿವ ಪ್ರಿಯಾಂಕ್ ಖರ್ಗೆ ಅವರ ಫೋನ್ ನಂಬರ್ ಹೇಗೆ ಸಿಕ್ಕಿತು ಎಂದು ವಿಚಾರಣೆ ನಡೆಸುತ್ತಿದ್ದಾರೆ. ಅಲ್ಲದೆ, ಆತ ಒಬ್ಬನೇ ಬೆದರಿಕೆ ಕರೆ ಮಾಡಿದ್ದಾನೋ, ಅಥವಾ ಇನ್ಯಾರಾದರು ಸಹಕಾರ ನೀಡಿದ್ದಾರೋ ಎಂಬುವುದನ್ನು ಪರಿಶೀಲಿಸುತ್ತಿದ್ದಾರೆ.


ಸರ್ಕಾರಿ ಸ್ಥಳಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳನ್ನು ನಿಷೇಧಿಸುವಂತೆ ಕೋರಿ ಅಕ್ಟೋಬರ್ 4ರಂದು ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು. ಈ ಕುರಿತು ಸೂಕ್ತ ಕ್ರಮ ಜರುಗಿಸುವಂತೆ ಮುಖ್ಯ ಕಾರ್ಯದರ್ಶಿಗೆ ಸಿಎಂ ಸಿದ್ದರಾಮಯ್ಯ ಅವರು ಅಕ್ಟೋಬರ್ 12ರಂದು ಟಿಪ್ಪಣಿ ಕಳುಹಿಸಿದ್ದರು.

ಪ್ರಿಯಾಂಕ್ ಖರ್ಗೆ ಪತ್ರ ಬರೆದಿರುವ ವಿಷಯ ಸುದ್ದಿಯಾಗುತ್ತಿದ್ದಂತೆ ಅವರಿಗೆ ಅನೇಕ ಬೆದರಿಕೆ ಕರೆಗಳು ಬರಲಾರಂಭಿಸಿವೆ ಎನ್ನಲಾಗಿದೆ. ಬುಧವಾರ (ಅ.15) ಈ ಸಂಬಂಧ ವಿಡಿಯೋವೊಂದನ್ನು ಪ್ರಿಯಾಂಕ್ ಖರ್ಗೆ ಹಂಚಿಕೊಂಡಿದ್ದರು. ವಿಡಿಯೋದಲ್ಲಿ, ಸಚಿವರಿಗೆ ಕರೆ ಮಾಡಿದ್ದ ಬಂಧಿತ ಆರೋಪಿ ಬೆದರಿಕೆ ಹಾಕಿದ್ದಲ್ಲದೆ, ಅವಾಚ್ಯ ಶಬ್ದಗಳಿಂದ ನಿಂದಿಸಿರುವುದು ಇತ್ತು.

## ಸಿಜೆಐ ಮೇಲೆ ದಾಳಿ: ವಕೀಲ ರಾಕೇಶ್ ಕಿಶೋರ್ ವಿರುದ್ಧ ನ್ಯಾಯಾಂಗ ನಿಂದನೆ ಕ್ರಮಕ್ಕೆ ಎಜಿ ಒಪ್ಪಿಗೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ





ಕಳೆದ ವಾರ ಸುಪ್ರೀಂ ಕೋರ್ಟ್‌ನಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರ ಮೇಲೆ ಶೂ ಎಸೆಯಲು ಯತ್ನಿಸಿದ ವಕೀಲ ರಾಕೇಶ್ ಕಿಶೋರ್ ವಿರುದ್ಧ ಕ್ರಿಮಿನಲ್ ನ್ಯಾಯಾಂಗ ನಿಂದನೆ ಪ್ರಕರಣಗಳನ್ನು ಆರಂಭಿಸಲು ಭಾರತದ ಅಟಾರ್ನಿ ಜನರಲ್ (ಎಜಿ) ಆರ್. ವೆಂಕಟರಮಣಿ ಒಪ್ಪಿಗೆ ನೀಡಿದ್ದಾರೆ ಎಂದು ಗುರುವಾರ (ಅ.16) ಸುಪ್ರೀಂ ಕೋರ್ಟ್‌ಗೆ ತಿಳಿಸಲಾಗಿದೆ.

ಸುಪ್ರೀಂ ಕೋರ್ಟ್ ಬಾರ್ ಅಸೋಸಿಯೇಷನ್‌ನ (ಎಸ್‌ಸಿಬಿಎ) ಅಧ್ಯಕ್ಷ, ಹಿರಿಯ ವಕೀಲ ವಿಕಾಸ್ ಸಿಂಗ್ ಮತ್ತು ಭಾರತದ ಸಾಲಿಸಿಟರ್ ಜನರಲ್ (ಎಸ್‌ಜಿ) ತುಷಾರ್ ಮೆಹ್ತಾ ಅವರು ಜಂಟಿಯಾಗಿ ಎರಡನೇ ಹಿರಿಯ ನ್ಯಾಯಾಧೀಶರಾದ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಪೀಠದ ಮುಂದೆ ಈ ವಿಷಯವನ್ನು ಪ್ರಸ್ತಾಪಿಸಿದ್ದು, ಕ್ರಿಮಿನಲ್ ನ್ಯಾಯಾಂಗ ನಿಂದನೆ ಪ್ರಕರಣವನ್ನು ವಿಚಾರಣೆಗೆ ಒಳಪಡಿಸುವಂತೆ ಕೋರಿದ್ದಾರೆ.

ಅಟಾರ್ನಿ ಜನರಲ್ ಅನುಮತಿ ನೀಡಿದ ಬಗ್ಗೆ ವಕೀಲ ವಿಕಾಸ್ ಸಿಂಗ್ ಪೀಠಕ್ಕೆ ಮಾಹಿತಿ ನೀಡಿದ್ದು, ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಈ ಸಂಗತಿಯನ್ನು ದೃಢಪಡಿಸಿದ್ದಾರೆ.

"ನಾನು ಅಟಾರ್ನಿ ಜನರಲ್ ಅವರ ಒಪ್ಪಿಗೆ ಪಡೆದುಕೊಂಡಿದ್ದೇನೆ ಮತ್ತು ನಾಳೆ ಈ ವಿಷಯವನ್ನು ಪಟ್ಟಿ ಮಾಡಲು ಕೋರುತ್ತೇನೆ" ಎಂದು ಸಿಂಗ್ ಹೇಳಿದ್ದಾರೆ. ಇದಕ್ಕೆ ಧ್ವನಿಗೂಡಿಸಿದ ತುಷಾರ್ ಮೆಹ್ತಾ ಅವರು, "ಅಟಾರ್ನಿ ಜನರಲ್ ಒಪ್ಪಿಗೆ ನೀಡಿದ್ದಾರೆ. ನಾನು ನನ್ನ ಸ್ನೇಹಿತನೊಂದಿಗೆ ಸೇರಿ ಈ ನ್ಯಾಯಾಂಗ ನಿಂದನೆ ಪ್ರಕರಣವನ್ನು ಕೈಗೆತ್ತಿಕೊಳ್ಳಲು ನಿಮ್ಮನ್ನು ವಿನಂತಿಸುತ್ತೇನೆ. ಇದು ಪ್ರಶ್ನಾರ್ಹ ಸಾಂವಿಧಾನಿಕ ಸಮಗ್ರತೆಯ ಪ್ರಕರಣ" ಎಂದು ಹೇಳಿದ್ದಾರೆ.

ಘಟನೆಯನ್ನು ವೈಭವೀಕರಿಸುವ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳನ್ನು ನಿರ್ಬಂಧಿಸಲು "ಜಾನ್-ಡೋ" ಆದೇಶವನ್ನು ಸಹ ಕೋರುತ್ತಿರುವುದಾಗಿ ಸಿಂಗ್ ಪೀಠಕ್ಕೆ ಹೇಳಿದ್ದಾರೆ. ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠವು, ಈ ವಿಷಯವನ್ನು ಮತ್ತಷ್ಟು ಕೆದಕಬೇಕೇ? ಎಂದು ಪ್ರಶ್ನಿಸಿದೆ. ಸಿಜೆಐ ಸ್ವತಃ ಘಟನೆಯನ್ನು ಬಿಟ್ಟುಬಿಟ್ಟಿದ್ದಾರೆ ಎಂದಿದೆ.

### ನಮ್ಮ ಜನಪರ ಯೋಜನೆಗಳನ್ನು ಯಾರೂ ಬದಲಿಸಲು ಸಾಧ್ಯವಿಲ್ಲ-ಡಿ ಕೆ ಶಿವಕುಮಾರ್

# ಕಾಂಗ್ರೆಸ್ ಗ್ಯಾರಂಟಿ ದೇಶಕ್ಕೆ ಮಾದರಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಅನ್ನಭಾಗ್ಯ ಯೋಜನೆಯಲ್ಲಿ ಹೆಚ್ಚುವರಿಯಾಗಿ ನೀಡಲಾಗುತ್ತಿರುವ ಅಕ್ಕಿ ದುರ್ಬಳಕೆಯಾಗುತ್ತಿರುವುದನ್ನು ತಪ್ಪಿಸಲು, ಎಣ್ಣೆ, ಬೇಳೆ, ಸಕ್ಕರೆ, ಉಪ್ಪು ಸೇರಿದಂತೆ ಐದಾರು ಪದಾರ್ಥಗಳಿರುವ ಇಂದಿರಾ ಕಿಟ್ ವಿತರಿಸಲು ಸರ್ಕಾರ ಚಿಂತನೆ ನಡೆಸುತ್ತಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಗುರುವಾರ ನಡೆದ ವಿಶ್ವ ಆಹಾರ ದಿನಾಚರಣೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

ಈ ಸರ್ಕಾರ ಬರುವ ಮುನ್ನ ಅನ್ನ ಭಾಗ್ಯ ಯೋಜನೆಯಡಿ 5 ಕೆ.ಜಿ ಅಕ್ಕಿಯನ್ನು 10 ಕೆ.ಜಿಗೆ ಏರಿಸುವುದಾಗಿ ಭರವಸೆ ನೀಡಿದೆವು. ನಂತರ ಇದರ ದುರ್ಬಳಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕಳೆದ ಸಚಿವ ಸಂಪುಟದಲ್ಲಿ ಹೊಸ ತೀರ್ಮಾನಕ್ಕೆ ಬಂದಿದ್ದೇವೆ.

"ನಾವು ಯಾರ ಒತ್ತಡಕ್ಕೂ ಒಳಗಾಗಿ ಈ ತೀರ್ಮಾನ ಮಾಡಿಲ್ಲ. ಈ ವಿಚಾರವಾಗಿ ಸಮೀಕ್ಷೆ ನಡೆಸಿ, ಜನಸಾಮಾನ್ಯರು ಹಾಗೂ ಶಾಸಕರ ಜೊತೆ ಚರ್ಚಿಸಿ ತೀರ್ಮಾನ ಮಾಡಿದ್ದೇವೆ. ಸಾಮಾನ್ಯವಾಗಿ ಪ್ರತಿ ಕುಟುಂಬದಲ್ಲಿ ತಿಂಗಳಿಗೆ ವ್ಯಕ್ತಿಗೆ 5-6 ಕೆ.ಜಿಗೆ ಅಕ್ಕಿ ಮಾತ್ರ ಬಳಸುತ್ತಾರೆ. ಹೀಗಾಗಿ ನಾವು ಕೊಟ್ಟ ಮಾತನ್ನೂ ಉಳಿಸಿಕೊಳ್ಳುವುದಕ್ಕೆ ಇಂದಿರಾ ಕಿಟ್ ವಿತರಿಸಲು ಮಾರ್ಗದರ್ಶನ ನೀಡಲಾಗಿದೆ. ನಮ್ಮ ಸರ್ಕಾರ ಸಿದ್ದರಾಮಯ್ಯ ಅವರ ನೇತೃತ್ವ ಹಾಗೂ ಸಚಿವ ಮುನಿಯಪ್ಪ ಅವರ ಮುಖಂಡತ್ವದಲ್ಲಿ ಈ ಐತಿಹಾಸಿಕ ತೀರ್ಮಾನ ಮಾಡಲಾಗಿದೆ" ಎಂದು ತಿಳಿಸಿದರು.

"ಈ ವಿಚಾರವಾಗಿ ರಾಜಕೀಯ ಚರ್ಚೆ ಮಾಡುತ್ತಾರೆ. ಯಡಿಯೂರಪ್ಪ ಅವರು ಒಂದು ಕಾಳು ಕಡಿಮೆ ಕೊಟ್ಟರು ಹೋರಾಟ ಮಾಡುವುದಾಗಿ ಹೇಳುತ್ತಿದ್ದರು. ಅವರು ಭಾವನೆ ಮೇಲೆ ರಾಜಕಾರಣ ಮಾಡುತ್ತಾರೆ. ನಮ್ಮ ಸರ್ಕಾರ ಸದಾ ಬದುಕಿನ ಮೇಲೆ ರಾಜಕಾರಣ ಮಾಡುತ್ತೇವೆ. ಇಡೀ ದೇಶದಲ್ಲಿ ನಮ್ಮ ರಾಜ್ಯದ ಗ್ಯಾರಂಟಿ ಯೋಜನೆಗಳ ಬಗ್ಗೆ ಚರ್ಚೆ ಮಾಡಿ ಅವರ ರಾಜ್ಯಗಳ ಯೋಜನೆ ನಿರ್ಣಯ ಮಾಡುತ್ತಿದ್ದಾರೆ" ಎಂದು ತಿಳಿಸಿದರು.

ಎಸ್.ಎಂ ಕೃಷ್ಣ ಅವರ ಕಾಲದಲ್ಲಿ ಶಾಲೆಗಳಲ್ಲಿ ಮಕ್ಕಳನ್ನು ಆಕರ್ಷಿಸಲು ಮಧ್ಯಾಹ್ನ ಬಿಸಿಯೂಟ ಯೋಜನೆ ಆರಂಭಿಸಲಾಯಿತು. ನಂತರ ಸಿದ್ದರಾಮಯ್ಯ ಅವರು ಬಸವ ಜಯಂತಿ ದಿನ ಅಧಿಕಾರ ಸ್ವೀಕರಿಸಿ ಮೊದಲ ದಿನವೇ ರಾಜ್ಯದಲ್ಲಿ ಯಾರೊಬ್ಬರೂ ಹಸಿವಿನಿಂದ ಇರಬಾರದು ಎಂದು ಅನ್ನಭಾಗ್ಯ ಯೋಜನೆ ಜಾರಿಗೆ ತಂದರು. ನಮ್ಮ ಈ ಕಾರ್ಯಕ್ರಮಗಳನ್ನು ಯಾವುದೇ ಸರ್ಕಾರಗಳು ನಿಲ್ಲಿಸಲು ಸಾಧ್ಯವಾಗಿಲ್ಲ. ನಂತರ ಮನಮೋಹನ್ ಸಿಂಗ್ ಅವರ ಕಾಲದಲ್ಲಿ ಸೋನಿಯಾ ಗಾಂಧಿ ಅವರ ಮಾರ್ಗದರ್ಶನದಲ್ಲಿ ದೇಶದಲ್ಲಿ ಆಹಾರ ಭದ್ರತೆ ಕಾಯ್ದೆ ಜಾರಿಗೆ ತಂದರು" ಎಂದು ಸ್ಮರಿಸಿದರು.

ಟೀಕೆ ಮಾಡಿದವರೇ ನಮ್ಮ ಗ್ಯಾರಂಟಿ ನಕಲು ಮಾಡುತ್ತಿದ್ದಾರೆ "ಈ ಹಿಂದೆ ಉಚಿತ ಗ್ಯಾಸ್ ನೀಡುವ ಯೋಜನೆಗೆ ಮೋದಿ ಫೋಟೋ ಹಾಕಿ ಎಲ್ಲಾ ಪೆಟ್ರೋಲ್ ಬಂಕ್ ಗಳ ಮುಂದೆ ಹಾಕುತ್ತಿದ್ದರು. ಈಗ ಅದನ್ನು ನಿಲ್ಲಿಸಿದ್ದಾರೆ. 400 ರೂಪಾಯಿ ಇದ್ದ ಅಡುಗೆ ಅನಿಲ 1100ಕ್ಕೆ ಏರಿಕೆಯಾಗಿತ್ತು. ಎಲ್ಲದರ ಬೆಲೆಗಳು ಗಗನಕ್ಕೇರಿದೆ, ಆದಾಯ ಪಾತಾಳಕ್ಕೆ ಕುಸಿದಿದೆ ಎಂದು ನಾವು ಗ್ಯಾರಂಟಿ ಯೋಜನೆ ಜಾರಿ ಮಾಡಿದೆವು. ಇದಕ್ಕೆ ಪ್ರತಿ ವರ್ಷ 53 ಸಾವಿರ ಕೋಟಿ ಅನುದಾನ ನೀಡುತ್ತಿದ್ದೇವೆ.

ಪ್ರಧಾನಮಂತ್ರಿಗಳು ಹಾಗೂ ಇತರೆ ನಾಯಕರು ನಮ್ಮ ಯೋಜನೆ ಟೀಕೆ ಮಾಡಿದರೂ ಕೊನೆಗೆ ತಮ್ಮ ರಾಜಕೀಯ ಸ್ಥಾನಮಾನ ಉಳಿಸಿಕೊಳ್ಳಲು ನಮ್ಮ ಯೋಜನೆಗಳನ್ನು ನಕಲು ಮಾಡುತ್ತಿದ್ದಾರೆ. ಬಿಹಾರದಲ್ಲಿ ಚುನಾವಣೆಯೇ ಘೋಷಣೆಯೇ ಆಗದಿದ್ದ ವೇಳೆಯಲ್ಲೇ ಆ ರಾಜ್ಯದ ಮಹಿಳೆಯರ ಖಾತೆಗೆ 10 ಸಾವಿರ ಹಾಕುತ್ತಿದ್ದಾರೆ. ಇಲ್ಲಿ ಜನರ ಹೊಟ್ಟೆಪಾಡು ವಿಚಾರ ಬಹಳ ಮುಖ್ಯ ಎಂದು ಸಾಬೀತಾಗುತ್ತದೆ" ಎಂದರು.

"ಏಷ್ಯಾ ಹಾಗೂ ನಮ್ಮ ದೇಶಗಳಲ್ಲಿ ಮಾತ್ರ ಬಿಸಿ ಬಿಸಿ ಆಹಾರ ತಿನ್ನುತ್ತೇವೆ. ಉಳಿದಂತೆ ಪಾಶ್ಚಾತ್ಯ ರಾಷ್ಟ್ರಗಳಲ್ಲಿ ಜಂಕ್ ಆಹಾರ, ಬ್ರೆಡ್, ಫಾಸ್ಟ್ ಫುಡ್ ಸೇವನೆ ಮಾಡುತ್ತಾರೆ. ನಮ್ಮ ದೇಶ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸಿ, ವಿದೇಶಗಳಿಗೆ ರಫ್ತು ಮಾಡುವ ಶಕ್ತಿ ಪಡೆದಿದ್ದೇವೆ. ಗುಜರಾತಿಗಿಂತ ಹೆಚ್ಚು ಹಾಲು ಉತ್ಪಾದನೆ ಮಾಡುತ್ತಿದ್ದೇವೆ. ನಮ್ಮ ಸರ್ಕಾರದ ಯೋಜನೆಗಳು ಜನಪರ ಕಾರ್ಯಕ್ರಮವಾಗಿದ್ದು, ದೇಶಕ್ಕೆ ಮಾದರಿಯಾಗಿವೆ" ಎಂದು ತಿಳಿಸಿದರು.

### ಬಡವರ ಬದುಕು ಬದಲಿಸಲು ಕಾಂಗ್ರೆಸ್ ಯೋಜನೆಗಳು

"ಈ ದೇಶದಲ್ಲಿ ಬಡವರ ಬದುಕಿನಲ್ಲಿ ಬದಲಾವಣೆ ತರಲು ಕಾಂಗ್ರೆಸ್ ಪಕ್ಷ ಹೇಗೆ ತೀರ್ಮಾನ ಮಾಡಿದ್ದೇವೆ ಎಂದು ಕಾಂಗ್ರೆಸ್ ಸರ್ಕಾರದ ಪ್ರತಿನಿಧಿಯಾಗಿ ನನಗೆ ಗೊತ್ತಿದೆ. ನೆಹರೂ ಅವರ ಕಾಲದಿಂದ ಬಡವರಿಗೆ ಆಹಾರ ವಿತರಣೆ ಕಾರ್ಯಕ್ರಮ ರೂಪಿಸಿದರು. ಇಂದಿರಾ ಗಾಂಧಿ ಹಾಗೂ ದೇವರಾಜ ಅರಸು ಅವರ ಕಾಲದಲ್ಲಿ ಉಳುವವನಿಗೆ ಭೂಮಿ ಕೊಡಲಾಯಿತು. ಬಡವರಿಗೆ ಪಡಿತರ ಜೊತೆಗೆ ಪಡಿತರ ಚೀಟಿ ವ್ಯವಸ್ಥೆ ಮಾಡಲಾಯಿತು ಎಂದರು.

### ಪ್ರತಿ ಅಗುಳಿಗೂ ಪ್ರಾಮುಖ್ಯತೆ ನೀಡಿ

"ಪ್ರತಿ ಹನಿ ನೀರಿಗೆ ಕೊಡುವ ಪ್ರಾಮುಖ್ಯತೆಯನ್ನು ಪ್ರತಿ ಅಗುಳು ಅನ್ನಕ್ಕೂ ನೀಡಬೇಕು. ನಾವೆಲ್ಲರೂ ಪ್ರಕೃತಿ ನಿಯಮದಲ್ಲಿ ಬದುಕುತ್ತಿದ್ದು, ಗಾಳಿ, ನೀರು, ಸೂರ್ಯನ ಜೊತೆಗೆ ಆಹಾರದ ಮೇಲೆ ಅವಲಂಬಿತವಾಗಿದ್ದೇವೆ. ಪ್ರಕೃತಿ ಆಹಾರದ ಮೂಲಕ ನಮ್ಮನ್ನು ಕಾಪಾಡಿಕೊಂಡು ಬಂದಿದೆ. ಹಸಿದವನಿಗೆ ಮಾತ್ರ ಆಹಾರದ ಬೆಲೆ ಗೊತ್ತಿದೆ. ಎಲ್ಲರೂ ಕಷ್ಟಪಡುವುದೂ ಒಂದು ತುತ್ತು ಆಹಾರ, ಒಂದು ಗೇಣು ಬಟ್ಟೆಗಾಗಿ. ಇದರ ಹೊರತಾಗಿ ನಾವು ಏನೇ ಮಾಡಿದರೂ ಅವು ತಾತ್ಕಾಲಿಕ ಮಾತ್ರ" ಎಂದು ಶಿವಕುಮಾರ್ ಹೇಳಿದರು.

# 'ಯುನಿವರ್ಸಿಟಿ ಬ್ಲೂ' ಗೌರವ



■ ವಿಜಯಸಾಕ್ಷಿ ಸುದ್ದಿ, ಗದಗ

ಬಿಷಪ್ ಕಾಟನ್ ವುಮೆನ್ಸ್ ಕ್ರಿಶ್ಚಿಯನ್ ಕಾನೂನು ಕಾಲೇಜು, ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಹಯೋಗದಲ್ಲಿ ಆಯೋಜಿಸಲಾದ ಯೋಗ ಸ್ಪರ್ಧೆಯಲ್ಲಿ ನಗರದ ಹುಲಕೋಟಿ ಸಹಕಾರ ಶಿಕ್ಷಣ ಸಂಸ್ಥೆಯ ಕಾನೂನು ಮಹಾವಿದ್ಯಾಲಯದ ದ್ವಿತೀಯ ವರ್ಷದ ವಿದ್ಯಾರ್ಥಿನಿ ಸಂಗೀತಾ ನಾಗಲಿಂಗನವರ್ ದ್ವಿತೀಯ ಸ್ಥಾನ ಗಳಿಸಿ, 2025-26ನೇ ಸಾಲಿನ ಯೂನಿವರ್ಸಿಟಿ ಬ್ಲೂ ಆಗಿ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿನಿಯ ಸಾಧನೆಗೆ ಎಚ್.ಸಿ.ಇ.ಎಸ್ ಸಂಸ್ಥೆಯ ಆಡಳಿತ ಮಂಡಳಿ, ಪ್ರಾಂಶುಪಾಲರಾದ ಪಲ್ಲವಿ ಬುಯ್ಯಾರ, ಕ್ರೀಡಾ ವಿಭಾಗದ ಮುಖ್ಯಸ್ಥರಾದ ಪ್ರೊ. ವಿಶ್ವನಾಥ್ ಹಿರೇಮಠ ಹಾಗೂ ಸರ್ವ ಸಿಬ್ಬಂದಿ ವೃಂದದವರು ಹಾರ್ದಿಕ ಅಭಿನಂದನೆಗಳನ್ನು ತಿಳಿಸಿದ್ದಾರೆ.



ಜಿಲ್ಲಾ ಮಟ್ಟದ 51 ಕೆಜಿ ವಿಭಾಗದ ಕುಸ್ತಿ ಪಂದ್ಯಾವಳಿಗಳಲ್ಲಿ ಮುಳಗುಂದ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ನಿಖಿಲ ಪೂಜಾರ, ಸಿದ್ಧಾರ್ಥ ಹೊಟ್ಟಿ, ಮಲ್ಲಿಕಾರ್ಜುನ ಪಲ್ಲೇದ ಪ್ರಥಮ ಸ್ಥಾನ ಪಡೆದಿದ್ದು, 55 ಕೆಜಿ ವಿಭಾಗದಲ್ಲಿ ಪರಶುರಾಮ ವಡ್ಡರ ದ್ವಿತೀಯ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ದೈಹಿಕ ಶಿಕ್ಷಕ ವಿ.ಟಿ. ಅಂಗಡಿ ತಿಳಿಸಿದ್ದಾರೆ.

### ಗ್ರಾ.ಪಂ ಸಿಬ್ಬಂದಿಗಳಿಂದ ಮನೆ ಮನೆ ಭೇಟಿ | ಅಕ್ಟೋಬರ್ 30 ಕೊನೆಯ ದಿನ

# ಜಾಬ್‌ಕಾರ್ಡ್ ಇ-ಕೆವೈಸಿ ಕಾರ್ಯಕ್ಕೆ ಸಹಕರಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ


ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನೋಂದಾಯಿತ, ಜಾಬ್ ಕಾರ್ಡ್ ಪಡೆದ ಕುಟುಂಬಸ್ಥರು ಅಕ್ಟೋಬರ್ 30ರ ಒಳಗಾಗಿ ಇ-ಕೆವೈಸಿ ಮಾಡಿಸುವುದು ಕಡ್ಡಾಯವಾಗಿದ್ದು, ಗ್ರಾಮ ಪಂಚಾಯಿತಿ ಸಿಬ್ಬಂದಿಗಳು Face Authentication ಮಾಡಲು ತಮ್ಮ ಮನೆಗಳಿಗೆ ಬಂದಾಗ ಸಹಕಾರ ನೀಡುವಂತೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ತಿಳಿಸಿದರು.

ಗದಗ ತಾಲೂಕು ಪಂಚಾಯಿತಿಯಿಂದ ಗೂಗಲ್ ಮೀಟ್ ಮೂಲಕ ಆಯೋಜಿಸಲಾದ ಸಭೆಯಲ್ಲಿ ಅವರು ಮಾತನಾಡಿದರು.

ಸಕ್ರಿಯ ಉದ್ಯೋಗ ಚೀಟಿಗಳಿಗೆ ಇ-ಕೆವೈಸಿ ಮಾಡುವಂತೆ ಆಯುಕ್ತಾಲಯದಿಂದ ಆದೇಶ ಬಂದಿದೆ. ಅದರಂತೆ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಈ ಬಗ್ಗೆ ಜಾಗೃತಿ ಮೂಡಿಸಿ, ಇ-ಕೆವೈಸಿ ಕಾರ್ಯಕ್ಕೆ ಅಗತ್ಯ ಸಿಬ್ಬಂದಿಗಳನ್ನು ನಿಯೋಜಿಸಿ ಸಕ್ರಿಯವಾಗಿರುವ ಜಾಬ್‌ಕಾರ್ಡ್‌ಗಳಿಗೆ ಇ-ಕೆವೈಸಿ ಕಾರ್ಯ ಮಾಡುತ್ತಿದ್ದಾರೆ. ಈಗಾಗಲೇ ನಮ್ಮ ಸಿಬ್ಬಂದಿಗಳು ಗ್ರಾಮದ ಮನೆ ಮನೆಗೆ ಭೇಟಿ ನೀಡಿ ಇ-ಕೆವೈಸಿ ಪ್ರಕ್ರಿಯೆಯಲ್ಲಿ ತೊಡಗಿಕೊಂಡಿದ್ದಾರೆ. ಈ ಪ್ರಕ್ರಿಯೆಯಲ್ಲಿ ಜಾಬ್ ಕಾರ್ಡ್ ಹೊಂದಿರುವ ಕೂಲಿಕಾರರೂ ತಮ್ಮ ತಮ್ಮ ಜಾಬ್ ಕಾರ್ಡ್‌ಗಳಿಗೆ ಇ-ಕೆವೈಸಿ ಮಾಡಿಸಿಕೊಳ್ಳುವುದು. ಇ-ಕೆವೈಸಿ ಮಾಡಿಸಿಕೊಳ್ಳದ ಜಾಬ್ ಕಾರ್ಡ್‌ಗಳು ಮುಂದಿನ ದಿನಗಳಲ್ಲಿ ನಿಷ್ಕ್ರಿಯವಾಗುವ ಸಾಧ್ಯತೆಯಿದ್ದು, ಗ್ರಾಮೀಣ ಭಾಗದ ಸಾರ್ವಜನಿಕರು ಸಾಧ್ಯವಾದಲ್ಲಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಇ-ಕೆವೈಸಿ ಮಾಡಿಸಿಕೊಳ್ಳುವಂತೆ ತಿಳಿಸಿದರು.

ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ (ಉಖಾ) ಕುಮಾರ ಪೂಜಾರ ಮಾತನಾಡಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಉದ್ಯೋಗ ಚೀಟಿ (Job Card)ಗಳಿಗೆ ಎನ್‌ಎಂಎಂಎಸ್ ಆ್ಯಪ್ ಮೂಲಕ ಇ-ಕೆವೈಸಿ ಮಾಡುವುದು ಕಡ್ಡಾಯವಾಗಿದ್ದು, ಗ್ರಾಮ ಪಂಚಾಯಿತಿಯ ಗ್ರಾಮ ಕಾಯಕ ಮಿತ್ರರು, ಬಿಎಫ್‌ಟಿ, ಡಿಇಒ ಮತ್ತು ಕಾಯಕ ಬಂಧುಗಳನ್ನು ಸಕ್ರಿಯವಾಗಿ ಇ-ಕೆವೈಸಿ ಕಾರ್ಯದಲ್ಲಿ ತೊಡಗಿಸಿಕೊಂಡು ಪೂರ್ಣಗೊಳಿಸುವಂತೆ ತಿಳಿಸಿದರು.

ತಾಲೂಕು ವ್ಯಾಪ್ತಿಯಲ್ಲಿ ಒಟ್ಟು 27 ಗ್ರಾಮ ಪಂಚಾಯಿತಿಗಳಿದ್ದು, ಒಟ್ಟು 52,022 ಸಕ್ರಿಯ ಉದ್ಯೋಗ ಚೀಟಿಗಳಿವೆ. ಸದ್ಯ 11 ಸಾವಿರಕ್ಕೂ ಹೆಚ್ಚು ಜಾಬ್ ಕಾರ್ಡ್‌ಗಳ ಇ-ಕೆವೈಸಿ ಮಾಡಲಾಗಿದೆ. ಈ ಕಾರ್ಯಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ ಎಂದು ತಿಳಿಸಿದರು.




> ಉದ್ಯೋಗ ಖಾತ್ರಿ ಯೋಜನೆಯ ನೋಂದಾಯಿತ ಸಕ್ರಿಯ ಕೂಲಿಕಾರರು ಇ-ಕೆವೈಸಿಯನ್ನು ಅ. 30ರ ಒಳಗಾಗಿ ಮಾಡಿಸುವುದು ಕಡ್ಡಾಯವಾಗಿದೆ. ಈಗಾಗಲೇ ಗ್ರಾ.ಪಂ ಹಂತದ ಸಿಬ್ಬಂದಿ ಮನೆ-ಮನೆಗೆ ಭೇಟಿ ನೀಡಿ ಇ-ಕೆವೈಸಿ ಮಾಡುತ್ತಿದ್ದಾರೆ. ಕಾರ್ಡ್‌ದಾರರು ಸಿಬ್ಬಂದಿಗಳೊಂದಿಗೆ ಸಹಕರಿಸಿ, ಇ-ಕೆವೈಸಿ ಕಾರ್ಯ ಪೂರ್ಣಗೊಳಿಸಿ.
>
> **– ಮಲ್ಲಯ್ಯ ಕೆ.**
> ಕಾರ್ಯನಿರ್ವಾಹಕ ಅಧಿಕಾರಿಗಳು,
> ತಾಲೂಕು ಪಂಚಾಯಿತಿ ಗದಗ.

# ಪಂ. ಪುಟ್ಟರಾಜ ಕವಿ ಗವಾಯಿಗಳವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿಗೆ ಶಿಫಾರಸ್ಸು ಮಾಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕರ್ನಾಟಕ ರಾಜ್ಯ ಶ್ರೀ ಪಂ. ಪುಟ್ಟರಾಜ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ಎಂ.ಪಿ. ಮುಳಗುಂದ ನೇತೃತ್ವದಲ್ಲಿ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿಗೆ ಶಿಫಾರಸ್ಸು ಹಾಗೂ ಗದಗ ನವೀಕರಣಗೊಂಡ ರೈಲು ನಿಲ್ದಾಣಕ್ಕೆ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಹೆಸರನ್ನು ನಾಮಕರಣ ಮಾಡಬೇಕೆಂದು ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಎಂ.ಪಿ. ಮುಳಗುಂದ ಮಾತನಾಡಿ, ಗದುಗಿನ ನಡೆದಾಡುವ ದೇವರೆಂದೇ ಪ್ರಸಿದ್ಧಿಯಾಗಿರುವ, ಸಂಗೀತ, ಸಾಹಿತ್ಯ, ನಾಟಕ ಶೈಕ್ಷಣಿಕ ಕ್ಷೇತ್ರಗಳಲ್ಲಿ ಅದ್ಭುತ ಸಾಧನೆಗೈದ ಲಿಂಗೈಕ್ಯ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿ ನೀಡಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು. ಗದಗ ಹೊಸ ರೈಲು ನಿಲ್ದಾಣಕ್ಕೆ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಹೆಸರನ್ನು ನಾಮಕರಣ ಮಾಡುವ ಕುರಿತು ರೈಲ್ವೆ ಇಲಾಖೆಗೆ ಶಿಫಾರಸ್ಸು ಮಾಡಬೇಕೆಂದು ಮನವಿ ಸಲ್ಲಿಸಲಾಗಿತ್ತು. ಆದರೆ ಈ ವಿಷಯವಾಗಿ ಇಲ್ಲಿಯವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ. ಈ ಬಗ್ಗೆ ಆದಷ್ಟು ಶೀಘ್ರವಾಗಿ ಕ್ರಮ ಕೈಗೊಳ್ಳಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ರಮೇಶ ಬೇಕ್ರಿ, ಅಷ್ಪಕಅಲಿ ಹೊಸಳ್ಳಿ, ಅಲ್ಲಾವುದ್ದೀನ ಮುಳಗುಂದ, ಗವಿಸಿದ್ದಯ್ಯ ಹಳ್ಳಿಕೇರಿ, ಶಂಭು ಅಂಗಡಿ, ಉಮೇಶ ರಾಂಪೂರ, ಭಗತ ಬಾಂಡಗೆ, ಪುಷ್ಪಾ ಬಿಜಾಪೂರ, ಆರಾಧನಾ ಬಣಕಾರ, ಈರಮ್ಮ ರಮೇಶ ತಾಳಿಕೋಟಿ, ಕವಿತಾ ಗುಡದೂರ, ಫಕೀರಯ್ಯ ಹಿರೇಮಠ, ಅಶೋಕ ಬಸಟ್ಟಿಯವರ, ದಾವಲಸಾಬ ನಾಗನೂರ, ವಿನಾಯಕ ಸಂಡೂರ, ರಾಜೇಸಾಬ ಪಿಂಜಾರ್ ಮುಂತಾದವರು ಉಪಸ್ಥಿತರಿದ್ದರು.

### ಲಕ್ಕುಂಡಿಯಲ್ಲಿ ಡಾ ಎ.ಪಿ.ಜೆ ಅಬ್ದುಲ್ ಕಲಾಂ ಜನ್ಮ ದಿನಾಚರಣೆ

# ಕಲಾಂರ ಆದರ್ಶಗಳು ಎಂದಿಗೂ ಶಾಶ್ವತ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಬಡ ಕುಟುಂಬದಲ್ಲಿ ಜನಿಸಿ, ಹಲವಾರು ಕಷ್ಟ-ನಷ್ಟಗಳನ್ನು ಅನುಭವಿಸಿ ವಿಜ್ಞಾನ ಕ್ಷೇತ್ರದಲ್ಲಿ ಅದ್ವಿತೀಯ ಸಾಧನೆ ಮಾಡಿ ಈ ದೇಶಕ್ಕೆ ಅಮೋಘ ಸೇವೆ ಸಲ್ಲಿಸಿದ ಮಾಜಿ ರಾಷ್ಟ್ರಪತಿ, ವಿಜ್ಞಾನಿ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ಅವರ ತತ್ವಾದರ್ಶಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಗದಗ ಉಪವಿಭಾಗಾಧಿಕಾರಿ ಗಂಗಮ್ಮ ಎಂ ಹೇಳಿದರು.

ಇಲ್ಲಿಯ ಅನ್ನದಾನೀಶ್ವರ ಸಭಾಭವನದಲ್ಲಿ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ಯೂಥ್ ಫೆಡರೇಶನ್ ಆಫ್ ಇಂಡಿಯಾ ಹಮ್ಮಿಕೊಂಡಿದ್ದ ಡಾ. ಕಲಾಂ ಅವರ 94ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಲಾಂ ಅವರು ನಮ್ಮೊಂದಿಗೆ ಇಂದು ಇಲ್ಲವಾದರೂ ಅವರ ಮಾಡಿದ ಸಾಧನೆಗಳು, ಅವರ ಜೀವನದ ತತ್ವದಾರ್ಶಗಳು ಜೀವಂತವಾಗಿದ್ದು, ನಮ್ಮೆಗೆಲ್ಲಾ ಮಾರ್ಗದರ್ಶಕವಾಗಿವೆ. ಮಕ್ಕಳ ಬಗ್ಗೆ ಹೆಚ್ಚು ಪ್ರೀತಿಯನ್ನು ಇಟ್ಟುಕೊಂಡಿದ್ದ ಅವರ ಸವಿ ನೆನಪಿಗಾಗಿ ಅಂಗನವಾಡಿ ಮಕ್ಕಳಿಗೆ ಕಲಾಂ ಅವರ ಜೀವನ ಚರಿತ್ರೆಯ ಪುಸ್ತಕಗಳನ್ನು ದೇಣಿಗೆ ನೀಡಿದ್ದು ಸ್ತುತ್ಯಾರ್ಹವಾಗಿದೆ ಎಂದರು.

ಗ್ರಾ.ಪಂ ಅಧ್ಯಕ್ಷರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಅಬ್ದುಲ್ ಕಲಾಂ ಅವರ ಜೀವನ ಚರಿತ್ರೆಯು ನಮಗೆ ಮಾರ್ಗದರ್ಶಕವಾಗಿದೆ. ಅವರ ಮೌಲ್ಯಯುತ ವಾಕ್ಯಗಳನ್ನು ಇಂದಿನ ಯುವಕರು ಅಳವಡಿಸಿಕೊಂಡು ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನರ ಮಾತನಾಡಿದರು.

ಎಸ್.ಎಸ್.ಎಲ್.ಸಿಯಲ್ಲಿ ಶೇ. 98ರಷ್ಟು ಅಂಕ ಗಳಿಸಿದ ವಿದ್ಯಾರ್ಥಿ ಪ್ರಕಾಶ ಪಾಪನಾಶಿ ಹಾಗೂ 14 ಅಂಗನವಾಡಿ ಕಾರ್ಯಕರ್ತರನ್ನು ಸನ್ಮಾನಿಸಲಾಯಿತು. ಜಿ.ಪಂ ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ಗ್ರಾ.ಪಂ ಸದಸ್ಯರಾದ ಪೀರಸಾಬ ನದಾಫ್, ಫಕ್ಕೀರಮ್ಮ ಬೇಲೇರಿ, ರಾಚಪ್ಪ ನಾಲ್ವಡದ, ಮರಿಯಪ್ಪ ವಡ್ಡರ, ಅಂದಾನಯ್ಯ ಮುನವಳ್ಳಿಮಠ, ಹುಸೇನಸಾಬ ಕದಾಂಪೂರ, ಬಸವರಾಜ ಪಾಪನಾಶಿ ವೇದಿಕೆಯಲ್ಲಿದ್ದರು. ಪಿ.ಡಿ.ಓ ಅಮೀರನಾಯಕ ಸ್ವಾಗತಿಸಿದರು. ನಮಿತಾ ವಿನೋದ ಕಲಾಲ ನಿರೂಪಿಸಿದರು. ಮಲ್ಲಮ್ಮ ಯಲಿಶಿರುಂದ ವಂದಿಸಿದರು.




> ಫೆಡರೇಶನ್‌ನ ಸಂಸ್ಥಾಪಕ ಅಮೃತ ಮಂಟೂರು ಮಾತನಾಡಿ, ವಿಶ್ವ ಕಂಡ ಅಪ್ರತಿಮ ನಾಯಕರಾಗಿದ್ದ ಕಲಾಂ ಅವರ ಶೈಕ್ಷಣಿಕ, ಬೌದ್ಧಿಕ ಮತ್ತು ಧಾರ್ಮಿಕ ತತ್ವ ಸಿದ್ಧಾಂತಗಳು ಇಂದಿನ ಯುವಕರಿಗೆ ಆದರ್ಶಗಳಾಗಿವೆ. ತ್ಯಾಗ ಮನೋಭಾವನೆಯುಳ್ಳ ಇವರು ಎಂದೆದಿಗೂ ಚಿರಸ್ಮರಣೀಯರು ಎಂದರು.

# ನೇಮಕಾತಿ-ಮೂಲ ದಾಖಲಾತಿ ಪರಿಶೀಲನೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಜ್ಯ ಮಟ್ಟದ ಮಾನವ ಸಂಪನ್ಮೂಲ ಖಠಕ-2025-26 ಅನುಮೋದನೆಯಂತೆ ಸಂಚಾರಿ ಆರೋಗ್ಯ ಘಟಕಗಳಿಗೆ 02 ಎಮ್,ಬಿ,ಬಿಎಸ್ ವೈದ್ಯಾಧಿಕಾರಿಗಳು, 02 ಶುಶ್ರೂಷ ಅಧಿಕಾರಿಗಳ ಮತ್ತು 02 ಪ್ರಯೋಗ ಶಾಲಾ ತಂತ್ರಜ್ಞರುಗಳ ಹುದ್ದೆಗಳು ಅನುಮೋದನೆಯಾಗಿದ್ದು. ಸದರಿ ಹುದ್ದೆಗಳನ್ನು ರೊಷ್ಟರ್ ಕಂ ಮೆರಿಟ್ ಆಧರಿಸಿ ನಿಬಂಧನೆಗೊಳಪಟ್ಟು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸದರಿ ಹುದ್ದೆಗಳಿಗೆ ಅಪ್ಲೋಡ್ ಆಗಿರುವ ಅರ್ಜಿಗಳಲ್ಲಿ ರೊಷ್ಟರ್ ಕಂ ಮೆರಿಟ್ ಅಳವಡಿಸಿದ 01 ಎಮ್,ಬಿ,ಬಿ ಎಸ್ ವೈದ್ಯಾಧಿಕಾರಿ, 02 ಶುಶ್ರೂಷ ಅಧಿಕಾರಿಗಳ ಮತ್ತು 02 ಪ್ರಯೋಗ ಶಾಲಾ ತಂತ್ರಜ್ಞರುಗಳ ಅರ್ಹ ಅಭ್ಯರ್ಥಿಗಳನ್ನು ದಿನಾಂಕ: 17.10.2025 ರಿಂದ 18.10.2025ರ ಸಂಜೆ 4.00 ವರೆಗೆ ಕಚೇರಿ ದಿನಗಳವರೆಗೆ ಖುದ್ದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿ ಗದಗ ಇಲ್ಲಿಗೆ ಮೂಲ ದಾಖಲಾತಿಗಳೊಂದಿಗೆ ಪರಿಶೀಲನಗೆ ಹಾಜರಾಗಲು ಇ-ಮೇಲ್ ಮೂಲಕ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿಯ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ.

# ಖಾಲಿ ಇರುವ ಹುದ್ದೆಗಳಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸಂಜೀವಿನಿ- ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯ ಎನ್‌ಆರ್ ಎಲ್‌ಎಂ ಯೋಜನೆಯಡಿ ಗದಗ ಜಿಲ್ಲೆ ಹಾಗೂ ತಾಲೂಕ ಅಭಿಯಾನ ನಿರ್ವಹಣಾ ಘಟಕಗಳಲ್ಲಿ ಖಾಲಿ ಇರುವ ಒಟ್ಟು 9 ಹುದ್ದೆಗಳನ್ನು ಹೊರಗುತ್ತಿಗೆ ಕೆಎಸ್‌ಆರ್‌ಎಲ್‌ಪಿಎಸ್‌ನ ನಿಯಮಾನುಸಾರ https://jobskrlps.karnataka.gov.in/index-new.aspx ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಯನ್ನು https://gadag.nic.in ಹಾಗೂ https:zpgadag.karnataka.gov.in ನಲ್ಲಿ ಪ್ರಕಟಿಸಲಾಗಿದೆ ಎಂದು ಗದಗ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಿ

■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ಗಜೇಂದ್ರಗಡ ತಾಲೂಕು ಕುರುಬ ಸಮಾಜದ ಅಧ್ಯಕ್ಷ ಹಾಗೂ ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ ಆಗ್ರಹಿಸಿದ್ದಾರೆ.

ಅವರು ಗುರುವಾರ ಪಟ್ಟಣದ ಪಿಡಬ್ಲುಡಿ ಪ್ರವಾಸಿ ಮಂದಿರಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ,

ಶಾಸಕ ಜಿ.ಎಸ್. ಪಾಟೀಲರು ಕಳೆದ ಐದು ದಶಕಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ತಮ್ಮ ಸೇವೆಯನ್ನು ಪಕ್ಷಕ್ಕೆ ಸಲ್ಲಿಸುತ್ತಾ ಬಂದಿದ್ದಾರೆ. ಗದಗ ಜಿಲ್ಲೆ ಸೇರಿದಂತೆ ನಾಡಿನಲ್ಲಿ ಪಕ್ಷದ ಬಲವರ್ಧನೆಗೆ ಶ್ರಮಿಸಿದ್ದಾರೆ. ಪಕ್ಷದ ವರಿಷ್ಠರು ನೀಡಿರುವ ಜವಾಬ್ದಾರಿಗಳನ್ನು ಸಮರ್ಪಕವಾಗಿ ಪೂರೈಸಿದ್ದಾರೆ. ಪಕ್ಷದ ಹಿರಿಯ ನಾಯಕರು ಅವರ ಪ್ರಾಮಾಣಿಕ ಸೇವೆಯನ್ನು ಗುರುತಿಸಿ ಸಚಿವ ಸ್ಥಾನ ನೀಡಬೇಕು ಎಂದರು. ಶಾಸಕ ಜಿ.ಎಸ್. ಪಾಟೀಲ ಜಾತ್ಯಾತೀತ ಮನೋಭಾವದ ನಾಯಕರಾಗಿದ್ದಾರೆ. ಅವರು ಎಲ್ಲ ಧರ್ಮಗಳ ಜನರೊಂದಿಗೆ ಬೆರೆತು ಕೆಲಸ ಮಾಡುವ ವ್ಯಕ್ತಿಯಾಗಿದ್ದು, ಜಿಲ್ಲೆಯ ಜನರ ಪ್ರೀತಿ-ವಿಶ್ವಾಸವನ್ನು ಗಳಿಸಿದ್ದಾರೆ. ಅವರ ನಾಯಕತ್ವದಲ್ಲಿ ಪಕ್ಷ ಬಲಿಷ್ಠಗೊಂಡಿದೆ ಎನ್ನುವುದನ್ನು ಯಾರು ಕೂಡ ತಳ್ಳಿಹಾಕುವಂತಿಲ್ಲ. ಅವರ ನಿಸ್ವಾರ್ಥ ಸೇವೆ ಪಕ್ಷದ ನಾಯಕರಿಗೂ ತಿಳಿದ ಸಂಗತಿಯಾಗಿದ್ದು, ಕೂಡಲೇ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡುವ ಮೂಲಕ ರೋಣ ಮತಕ್ಷೇತ್ರಕ್ಕೆ ನ್ಯಾಯ ಒದಗಿಸಬೇಕು. ಎಂದರು.



# ಗ್ರಾಹಕರು ಎಚ್ಚರಿಕೆಯಿಂದ ವ್ಯವಹರಿಸಿ




■ ವಿಜಯಸಾಕ್ಷಿ ಸುದ್ದಿ, ಡಂಬಳ

ಸೈಬರ್ ಮೋಸಗಳ ಬಗ್ಗೆ ಮತ್ತು ಸಾಮಾಜಿಕ ಜಾಲತಾಣಗಳ ಬಳಕೆಯಲ್ಲಿ ಎಚ್ಚರಿಕೆ ವಹಿಸಬೇಕು. ಭ್ರಷ್ಟಾಚಾರದ ವಿರುದ್ಧ ಸಾರ್ವಜನಿಕ ಜಾಗೃತಿ ಮೂಡಿಸಲು ಮತ್ತು ಪ್ರಾಮಾಣಿಕ ಸಮಾಜ ಸೃಷ್ಟಿಸುವಲ್ಲಿ ಸಕ್ರಿಯ ಭಾಗವಹಿಸುವಿಕೆ ಮಹತ್ವದ್ದಾಗಿದೆ. ಆ ಹಿನ್ನೆಲೆಯಲ್ಲಿ ಸಾರ್ವಜನಿಕರು ಮತ್ತು ವಿವಿಧ ಬ್ಯಾಂಕುಗಳ ಗ್ರಾಹಕರು ಪ್ರಸ್ತುತ ದಿನಗಳಲ್ಲಿ ಅತ್ಯಂತ ಎಚ್ಚರಿಕೆಯಿಂದ ವ್ಯವಹರಿಸಬೇಕೆಂದು ಡಂಬಳ ಗ್ರಾಮದ ಬ್ಯಾಂಕ್ ಆಫ್ ಇಂಡಿಯಾ ವ್ಯವಸ್ಥಾಪಕ ಜಗದೀಶ ಕಣಸೋಗಿ ಹೇಳಿದರು.

ಡಂಬಳ ಹೋಬಳಿಯ ಡಂಬಳ, ಡ.ಸಾ. ರಾಮೇನಳ್ಳಿ, ಪೇಠಾ ಆಲೂರ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ಗುರುವಾರ ಡಂಬಳ ಗ್ರಾಮದ ಬ್ಯಾಂಕ್ ಆಫ್ ಇಂಡಿಯಾ ವತಿಯಿಂದ ಹಮ್ಮಿಕೊಂಡಿದ್ದ ಅರಿವು ಸಪ್ತಾಹ 2025ರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬ್ಯಾಂಕಗಳು ಅಥವಾ ಹಣಕಾಸು ಸಂಸ್ಥೆಗಳು ಗ್ರಾಹಕರಿಗೆ ಹಣಕಾಸು ವಂಚನೆಗಳು, ಸೈಬರ್ ಮೊಸಗಳು ಮತ್ತು ಸಾಮಾಜಿಕ ಜಾಲತಾಣಗಳ ಬಳಕೆಯಲ್ಲಿ ಎಚ್ಚರಿಕೆ ವಹಿಸುವ ಬಗ್ಗೆ ಅರಿವು ಮೂಡಿಸಲು ಆಯೋಜಿಸುವ ವಾರ್ಷಿಕ ಕಾರ್ಯಕ್ರಮವಾಗಿದೆ. ಇದನ್ನು ಸಾಮಾನ್ಯವಾಗಿ ಭ್ರಷ್ಟಾಚಾರ ವಿರೋಧಿ ಜಾಗೃತ ಆಯೋಗದ ನಿರ್ದೇಶನದಲ್ಲಿ ನಡೆಸಲಾಗುತ್ತದೆ. ಗ್ರಾಹಕರು ತಮಗೆ ಏನಾದರೂ ಸಮಸ್ಯೆ ಇದ್ದರೆ ನಮಗೆ ತಿಳಿಸಬೇಕು. ಯಾವುದೇ ರೀತಿಯ ಸೈಬರ್ ವಂಚನೆಗೆ ಒಳಗಾಗದಂತೆ ಪ್ರತಿಯೊಬ್ಬರೂ ಜಾಗೃತಿ ವಹಿಸಬೇಕೆಂದು ಗ್ರಾಹಕರಿಗೆ ಸಲಹೆ ನೀಡಿದರು.

ಪಿ.ಡಿ.ಓ ವಸಂತ ಗೋಕಾಕ ಮಾತನಾಡಿ, ಅಪರಿಚಿತ ಲಿಂಕ್‌ಗಳ ಮೇಲೆ ಕ್ಲಿಕ್ ಮಾಡಬೇಡಿ, ಖಾಸಗಿ ವಿವರ ಅಥವಾ ಒಟಿಪಿ ಹಂಚಿಕೊಳ್ಳಬೇಡಿ. ಯಾವುದೇ ಆನ್‌ಲೈನ್ ವ್ಯವಹಾರ ಮಾಡುವ ಮುನ್ನ ದೃಢೀಕರಿಸಿ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ಬಸವರಾಜ ಜಕ್ಕಮ್ಮನವರ, ರವೀಂದ್ರ ಸೂಡಿ, ಮಾಬುಜಾನ ಬನ್ನಿಕೊಪ್ಪ, ಸಿದ್ಧಪ್ಪ ಎಮ್.ಮಠದ, ಬ್ಯಾಂಕ್ ಸಿಬ್ಬಂದಿ ಮಹೇಶ ಬಂಡಿ, ಗ್ರಾಮದ ಹಿರಿಯರು, ಮಹಿಳೆಯರು ಇದ್ದರು.

# ಯೋಗಿಕ ವಿಶ್ರಾಮಧಾಮ ಲೋಕಾರ್ಪಣೆ



■ ವಿಜಯಸಾಕ್ಷಿ ಸುದ್ದಿ, ಯಲ್ಲಾಪುರ

ನಯನ ಮನೋಹರ, ಸ್ವಚ್ಛ ಸುಂದರ ಮತ್ತು ಹಸಿರು ಪರಿಸರದ ತಪೋವನದಲ್ಲಿ ನಿಂತು ನನಗೆ ತುಂಬಾ ಸಂತೋಷವಾಗುತ್ತಿದೆ. ಇಂತಹ ವಿಶ್ರಾಂತಿ ಧಾಮಗಳು, ರಾಜಯೋಗಿಗಳಿಗೆ ಅವಶ್ಯಕವಾಗಿದ್ದು, ಇಂದು ಅನೇಕ ವರ್ಷಗಳ ನನ್ನ ಕನಸು ಸಾಕಾರವಾಗಿದೆ ಎಂದು ಬ್ರಹ್ಮಾಕುಮಾರಿ ಸಂಸ್ಥೆಯ ವಲಯ ನಿರ್ದೇಶಕರಾದ ಬಸವರಾಜ ರಾಜಋಷಿಗಳು ಸಂತಸ ಹಂಚಿಕೊಂಡರು.

ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರ ಪಟ್ಟಣದ ಹತ್ತಿರ ಇರುವ ತಪೋವನದಲ್ಲಿ ಯೋಗಿಕ ವಿಶ್ರಾಮಧಾಮದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬ್ರಹ್ಮಕುಮಾರಿ ಲೀಲಾ ದಾವಣಗೆರೆ ಸ್ವಾಗತಿಸಿ, ಸದ್ಯ 30 ಕೋಣೆಗಳು ಲಭ್ಯವಿದ್ದು, ಮತ್ತಷ್ಟು ಕೋಣೆಗಳನ್ನು ನಿರ್ಮಿಸುವ ಯೋಜನೆ ಇದೆ ಎಂದು ತಿಳಿಸಿದರು.

ವಲಯ ಸಂಚಾಲಕಿ ಬ್ರಹ್ಮಕುಮಾರಿ ನಿರ್ಮಲ ಹುಬ್ಬಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬ್ರಹ್ಮಕುಮಾರಿ ವೀಣಾ ಶಿರಸಿ ಕಾರ್ಯಕ್ರಮ ನಿರೂಪಿಸಿದರು. ರುದ್ರೇಶ್ ಮಲೆಬೆನ್ನೂರ್, ರಾಜಕುಮಾರ್, ಪ್ರಕಾಶ್ ತಂಬದ, ಶ್ರೀಧರ ಹುಬ್ಬಳ್ಳಿ, ಶಿವಾನಂದ್ ತೇ-ಣಡಕರ ಮುಂತಾದ ಗಣ್ಯರೊಂದಿಗೆ ಸಂಸ್ಥೆಯ ಹಿರಿಯ ಸಂಚಾಲಕರಾದ ಜಯಂತಿ, ಸುಲೋಚನ, ನಿರ್ಮಲ, ಶಕುಂತಲಾ, ವಿಜಯ ಮುಂತಾದವರು ಉಪಸ್ಥಿತರಿದ್ದರು.

## ಅನುದಾನ ಕಲ್ಪಿಸುವಂತೆ ಸಚಿವರಿಗೆ ಮನವಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿರಹಟ್ಟಿ ಮತಕ್ಷೇತ್ರದ ರಸ್ತೆಗಳ ಅಭಿವೃದ್ಧಿಗೆ ಅನುದಾನ ಕಲ್ಪಿಸುವಂತೆ ಶಾಸಕ ಡಾ. ಚಂದ್ರು ಲಮಾಣಿ ಬೆಂಗಳೂರಿನಲ್ಲಿ ಪಿಡಬ್ಲೂಡಿ ಸಚಿವರಾದ ಸತೀಶ ಜಾರಕಿಹೊಳಿ ಅವರಿಗೆ ಮನವಿ ಸಲ್ಲಿಸಿದರು.

ಶಿರಹಟ್ಟಿ ಮತಕ್ಷೇತ್ರದ ಅತ್ಯಂತ ಹಿಂದುಳಿದ ಪ್ರದೇಶವಾಗಿದ್ದು, ಈ ಕ್ಷೇತ್ರದ ಲಕ್ಷ್ಮೇಶ್ವರ, ಶಿರಹಟ್ಟಿ, ಮುಂಡರಗಿ ತಾಲೂಕಿನಲ್ಲಿ ಬಹುತೇಕ ರಸ್ತೆಗಳು ಅತಿಯಾದ ಮಳೆಯಿಂದ ಸಂಪೂರ್ಣ ಹಾಳಾಗಿವೆ. ನಿತ್ಯದ ಸಾರಿಗೆ ವ್ಯವಸ್ಥೆ ಮತ್ತು ಜನಜೀವನದ ಮೇಲೆ ಇದು ವ್ಯತಿರಿಕ್ತ ಪರಿಣಾಮ ಬೀರಿದೆ. ರಸ್ತೆಗಳ ಅಭಿವೃದ್ಧಿಯಾಗಬೇಕು ಎಂಬುದು ಕ್ಷೇತ್ರದ ಜನರ ಒತ್ತಾಸೆಯಾಗಿದೆ. ಕ್ಷೇತ್ರದ ಅಭಿವೃದ್ಧಿಯ ಹಿತದೃಷ್ಟಿಯಿಂದ ಹೆಚ್ಚುವರಿ ಅನುದಾನ ಕಲ್ಪಿಸುವಂತೆ ಮನವಿ ಮಾಡಿದರು.

ರಸ್ತೆಗಳ ಅಭಿವೃದ್ಧಿಗೆ ಅನುದಾನ ಕಲ್ಪಿಸುವ ಬಗ್ಗೆ ಸಕಾರಾತ್ಮಕವಾಗಿ ಸ್ಪಂದಿಸಿರುವ ಸಚಿವರು, ಈಗಾಗಲೇ ಸೂರಣಗಿ-ಬೆಳ್ಳಟ್ಟಿ ಮತ್ತು ಸೂರಣಗಿ-ಬಾಲೆಹೊಸೂರ ರಸ್ತೆ ಅಭಿವೃದ್ಧಿಗೆ ಅನುದಾನ ಕಲ್ಪಿಸಿದ್ದು, ಮಳೆ ಬಿಡುವಾದ ನಂತರ ರಸ್ತೆ ಅಭಿವೃದ್ಧಿ ಕಾರ್ಯ ಪ್ರಾರಂಭಿಸಲಾಗುವುದು ಎಂದರು.

### ಲಿಂ. ಶ್ರೀ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳವರ 11ನೇ ವರ್ಷದ ಪುಣ್ಯ ಸ್ಮರಣೋತ್ಸವದಲ್ಲಿ ರಂಭಾಪುರಿ ಶ್ರೀಗಳು

# ನಿರ್ಮಲ ಮನಸ್ಸಿನಿಂದ ಶ್ರಮಿಸಿದರೆ ಜನಕಲ್ಯಾಣ ಸಾಧ್ಯ

**■ವಿಜಯಸಾಕ್ಷಿ ಸುದ್ದಿ, ಕುಷ್ಟಗಿ**

ಭಾರತೀಯ ಸಂಸ್ಕೃತಿ ಮತ್ತು ಪರಂಪರೆ ಅತ್ಯಂತ ಪಾವಿತ್ರ್ಯತೆಯನ್ನು ಹೊಂದಿದೆ. ಧರ್ಮ ಮತ್ತು ಭಾವೈಕ್ಯತೆ ಭಾರತದ ಉಸಿರು. ಖಾದಿ, ಖಾಕಿ ಮತ್ತು ಕಾವಿ ಜನಾಂಗವು ನಿರ್ಮಲ ಮನಸ್ಸಿನಿಂದ ಶ್ರಮಿಸಿದರೆ ಜನಕಲ್ಯಾಣದ ಜೊತೆಗೆ ಲೋಕ ಕಲ್ಯಾಣವಾಗುವುದರಲ್ಲಿ ಸಂದೇಹ ಇಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಚಳಗೇರಾ ಹಿರೇಮಠದ ಲಿಂ. ಶ್ರೀ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳವರ 11ನೇ ವರ್ಷದ ಪುಣ್ಯ ಸ್ಮರಣೋತ್ಸವ ಹಾಗೂ ನವೀಕೃತ ಹಿರೇಮಠದ ಉದ್ಘಾಟನೆಯ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ನಾಡಿನ ಮಠಗಳು ಹಾಗೂ ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಸಂವರ್ಧನಾ ಕೇಂದ್ರಗಳಾಗಿವೆ. ಜನ ಮನವನ್ನು ತಿದ್ದುವ ಮತ್ತು ರಾಷ್ಟ್ರಾಭಿಮಾನವನ್ನು ಬೆಳೆಸುವ ಅದ್ಭುತ ತಾಣಗಳಾಗಿವೆ. ಜನರು ಯತಾರ್ಥ ಅರಿತು ಸಾತ್ವಿಕ, ಸಮೃದ್ಧ ನಾಡನ್ನು ಕಟ್ಟಲು ಪ್ರಾಮಾಣಿಕ ಪ್ರಯತ್ನ ಮಾಡಬೇಕಾಗಿದೆ. ಧ್ಯಾನ, ಜ್ಞಾನ ಮತ್ತು ಆಧ್ಯಾತ್ಮಿಕ ಚಿಂತನೆ ಮಾಡುವುದರಿಂದ ವ್ಯಕ್ತಿಯ ಆತ್ಮಸ್ಥೈರ್ಯ ಮತ್ತು ಮನೋಬಲ ವೃದ್ಧಿ ಸಾಧ್ಯವಾಗುತ್ತದೆ. ಸದೃಢ ರಾಷ್ಟ್ರ ನಿರ್ಮಾಣದಲ್ಲಿ ಯುವ ಶಕ್ತಿಯ ಪಾತ್ರ ದೊಡ್ಡದು. ಆಲಸ್ಯ ಮತ್ತು ದುರ್ವ್ಯಸನಗಳಿಂದ ದೂರವಾಗಿ ಸಮಾಜವನ್ನು ಕಟ್ಟಿ ಬೆಳೆಸುವ ನಿಟ್ಟಿನಲ್ಲಿ ಯುವ ಜನಾಂಗ ಗಟ್ಟಿ ಹೆಜ್ಜೆಯನ್ನಿಡುವ ಅಗತ್ಯವಿದೆ ಎಂದರು. ನೇತೃತ್ವ ವಹಿಸಿದ ಚಳಗೇರಾ ಹಿರೇಮಠದ ವೀರಸಂಗಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಧರ್ಮ ಮತ್ತು ಆಧ್ಯಾತ್ಮ ಸಾಧನೆಯಲ್ಲಿ ಬಹು ದೊಡ್ಡ ಶಕ್ತಿಯಿದೆ. ಬದುಕು ಬದಲಾಗಬೇಕಾದರೆ ಬದುಕುವ ದಾರಿ ಬದಲಾಗಬೇಕಾಗುತ್ತದೆ. ಲಿಂ. ವಿರೂಪಾಕ್ಷ ಶಿವಾಚಾರ್ಯರು ಯಾರನ್ನೂ ಕಾಡದೇ ಬೇಡದೇ ಎಲ್ಲ ಜನಾಂಗದವರನ್ನು ವಾತ್ಸಲ್ಯದಿಂದ ಕಂಡು ಅವರ ಬಾಳಿನಲ್ಲಿ ಬೆಳಕು ಮೂಡಿಸಿದ್ದಾರೆ ಎಂದರು.



> ಸಾನ್ನಿಧ್ಯ ವಹಿಸಿದ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಆಶೀರ್ವಚನ ನೀಡಿ, ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಧರ್ಮದ ದಶವಿಧ ಸೂತ್ರಗಳು ಸಕಲರ ಬಾಳಿನಲ್ಲಿ ಬೆಳಕು ಮೂಡಿಸುತ್ತವೆ. ಲಿಂ. ಶ್ರೀ ವಿರೂಪಾಕ್ಷ ಶ್ರೀಗಳವರು ಒಬ್ಬ ಆಧ್ಯಾತ್ಮ ಸಾಧಕರಾಗಿದ್ದು ವೀರಶೈವ ಧರ್ಮ ಸಂಸ್ಕೃತಿಯನ್ನು ಜನಮನಕ್ಕೆ ತಲುಪಿಸಿದ ಶ್ರೇಯಸ್ಸು ಅವರದು. ಇಂದಿನ ವೀರಸಂಗಮೇಶ್ವರ ಶ್ರೀಗಳು ಮಠದ ಅಭಿವೃದ್ಧಿಗಾಗಿ ಸದಾ ಶ್ರಮಿಸುತ್ತಿದ್ದಾರೆ ಎಂದರು.

ಹೈದ್ರಾಬಾದಿನಲ್ಲಿ ವಾಸವಾಗಿರುವ ಹೊಸಳ್ಳಿಯ ಕುಮಾರಸ್ವಾಮಿ ಹಿರೇಮಠರಿಗೆ 'ಉದ್ಯಾನ್ಯ ಶಿಲ್ಪಿ' ಪ್ರಶಸ್ತಿ ಮತ್ತು ಬೆಂಗಳೂರಿನಲ್ಲಿ ವಾಸವಾಗಿರುವ ಹಿರೇಕೊಡಗಲಿಯ ಪಂಚಾಕ್ಷರಿ ಹಿರೇಮಠ ಅವರಿಗೆ 'ವೀರಶೈವ ಯುವಸಿರಿ' ಪ್ರಶಸ್ತಿಯನ್ನು ಉಭಯ ಜಗದ್ಗುರುಗಳು ಪ್ರದಾನ ಮಾಡಿ ಶುಭ ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಬಿ.ಎಸ್. ಪಾಟೀಲ, ಮಾಜಿ ಶಾಸಕರಾದ ಕೆ. ಶರಣಪ್ಪ ವಕೀಲರು, ಹಸನಸಾಬ ದೋಟಿಹಾಳ ಪಾಲ್ಗೊಂಡು ಗುರುರಕ್ಷೆ ಸ್ವೀಕರಿಸಿದರು. ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು.

# ಇ-ಕೆವೈಸಿ ಶೀಘ್ರ ಪೂರ್ಣಗೊಳಿಸಿ

**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ನೋಂದಾಯಿತವಾಗಿರುವ ತಾಲೂಕಿನ ಎಲ್ಲ ಗ್ರಾಮೀಣ ಕುಟುಂಬಗಳ ಉದ್ಯೋಗ ಚೀಟಿ ಇ-ಕೆವೈಸಿ ಪ್ರಕ್ರಿಯೆಯನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ತಾಲೂಕು ಪಂಚಾಯಿತಿ ನರೇಗಾ ಸಿಬ್ಬಂದಿಗಳಿಗೆ ತಾ.ಪಂ ಇಓ ವಿಶ್ವನಾಥ ಹೊಸಮನಿ ತಿಳಿಸಿದರು.



ತಮ್ಮ ಕಚೇರಿಯಲ್ಲಿ ನರೇಗಾ ಸಿಬ್ಬಂದಿಗಳ ಸಭೆ ನಡೆಸಿ ಮಾತನಾಡಿದ ಅವರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ಇ-ಕೆವೈಸಿ ಪ್ರಕ್ರಿಯೆ ಕಡ್ಡಾಯವಾಗಿ ಮಾಡಬೇಕಿರುವ ಕುರಿತು ಆದೇಶವಿರುವುದರಿಂದ ನರೇಗಾ ಕೂಲಿಕಾರರನ್ನು ಮನೆ ಮನೆಗೆ ಸಂಪರ್ಕಿಸಿ ಸಕ್ರಿಯವಾಗಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಿದರು.

ತಾಲೂಕಿನ 19 ಗ್ರಾ.ಪಂಗಳ ಮಟ್ಟದಲ್ಲಿ ಮನರೇಗಾ ಸಿಬ್ಬಂದಿಗಳಾದ ಗ್ರಾಮ ಕಾಯಕ ಮಿತ್ರ, ಬಿಎಫ್‌ಟಿ, ತಾಂತ್ರಿಕ ಸಹಾಯಕರಿಗೆ ಇ-ಕೆವೈಸಿ ಕುರಿತು ತರಬೇತಿ ನೀಡಲಾಗಿದೆ. ಗ್ರಾ.ಪಂಗಳ ಇತರ ಸಿಬ್ಬಂದಿಗಳನ್ನು ಬಳಸಿಕೊಂಡು ಸಕ್ರಿಯ ಕೂಲಿಕಾರರ ಜಾಬ್ ಕಾರ್ಡ್‌ಗಳನ್ನು ಇ-ಕೆವೈಸಿ ಮೂಲಕ ಪರಿಶೀಲಿಸುವ ಕಾರ್ಯ ತುರ್ತಾಗಿ ನಡೆಯಲಿ ಎಂದರು.

ನರೇಗಾ ತಾಂತ್ರಿಕ ಸಹಾಯಕರು ಕೃಷಿ ಇಲಾಖೆ ಅಡಿಯ ಕೃಷಿ ಹೊಂಡ ಕಾಮಗಾರಿಗಳನ್ನು ಶೀಘ್ರವೇ ಆರಂಭಿಸಿ, ಕೂಲಿಕಾರರಿಗೆ ಉದ್ಯೋಗ ನೀಡಲು ಸೂಚಿಸಿ. ಇದರಿಂದ ಮಾನವ ದಿನಗಳ ಸೃಜನೆಯು ಸಾಧ್ಯವಾಗಲಿದೆ. ಈ ಬಗ್ಗೆ ಗಮನಹರಿಸಿ ಎಂದು ತಿಳಿಸಿದರು.

ಚಾಲ್ತಿ ಕಾಮಗಾರಿಗಳನ್ನು ಮುಕ್ತಾಯಗೊಳಿಸಿ ಹೊಸ ಕಾಮಗಾರಿಗಳ ಮೂಲಕ ಗ್ರಾಮೀಣ ಭಾಗದಲ್ಲಿ ಕೂಲಿಕಾರರಿಗೆ ಉದ್ಯೋಗ ನೀಡಿ. 2026-27ನೇ ನರೇಗಾ ಕ್ರಿಯಾಯೋಜನೆಗೆ ಈಗಾಗಲೇ ಸುತ್ತೋಲೆ ಬಂದಿದ್ದು, ಕ್ರಿಯಾಯೋಜನೆ ಸಿದ್ಧಪಡಿಸುವ ಕಾರ್ಯ ನಡೆಯಲಿ ಎಂದರು.

ಈ ವೇಳೆ ಟಿಸಿ ಪ್ರವೀಣ ಸೂಡಿ, ಟಿಎಂಐಎಸ್ ಬಸವರಾಜ ಮಣ್ಣಮ್ಮನವರ, ತಾಂತ್ರಿಕ ಸಹಾಯಕರು, ಬಿಎಫ್‌ಟಿಗಳು ಇದ್ದರು.

## ಹೆಚ್ಚುವರಿ ಶಾಲಾ ಕೊಠಡಿ ನಿರ್ಮಾಣಕ್ಕೆ ಆಗ್ರಹ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಸಂಕದಾಳ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕೊಠಡಿಗಳ ಕೊರತೆಯಿಂದ ವಿದ್ಯಾರ್ಥಿಗಳ ಕಲಿಕೆಗೆ ಹಿನ್ನಡೆಯಾಗುತ್ತಿದೆ. ಕಾರಣ ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಬೇಕು ಎಂದು ಆಗ್ರಹಿಸಿ ಗ್ರಾಮಸ್ಥರು ಬುಧವಾರ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ ಅವರಿಗೆ ಮನವಿ ಸಲ್ಲಿಸಿದರು.

ಗ್ರಾಮದ ಶಾಲೆಯಲ್ಲಿ ಕೊಠಡಿಗಳ ಕೊರತೆಯಿದೆ. ಸಾರಿಗೆ ವ್ಯವಸ್ಥೆಯೂ ಸಮರ್ಪಕವಾಗಿಲ್ಲ. ಶಾಲೆಗೆ ಆಟದ ಮೈದಾನವೂ ಇಲ್ಲ. ಇರುವ ಸಣ್ಣ ಮೈದಾನದಲ್ಲಿ ವಾಹನಗಳು ನಿಲ್ಲುತ್ತಿವೆ. ಇದರಿಂದಾಗಿ ಮಕ್ಕಳಿಗೂ ತೀವ್ರ ತೊಂದರೆ ಆಗುತ್ತಿದೆ. ಇನ್ನು ಶಾಲೆ ಸುತ್ತ ಕಂಪೌಂಡ್ ನಿರ್ಮಿಸಲೂ ಜಾಗೆ ಇಲ್ಲ. ಈ ಗ್ರಾಮದ ಬಕಾರಿ ಮನೆತನದವರು ಸರ್ಕಾರಿ ಶಾಲೆಗೆ 20 ಗುಂಟೆ ಜಮೀನನ್ನು ದಾನವಾಗಿ ನೀಡಿದ್ದಾರೆ. ಈ ಜಾಗೆಯಲ್ಲಿನೂತನ ಕೊಠಡಿಗಳನ್ನು ನಿರ್ಮಿಸಿ ಮಕ್ಕಳಿಗೆ ಅನುಕೂಲ ಮಾಡಿಕೊಡಬೇಕು ಎಂದು ಗ್ರಾಮದ ಹಿರಿಯರಾದ ಪಕ್ಕೀರಯ್ಯ ಹಿರೇಮಠ, ದುರಗಪ್ಪ ಹರಿಜನ, ನೀಲನಗೌಡ ಪಾಟೀಲ, ಹಾಲಪ್ಪ ಸೂರಣಗಿ, ಎಸ್‌ಡಿಎಂಸಿ ಅಧ್ಯಕ್ಷ ರವಿ ಹರಿಜನ, ಶರೀಫ್ ಹರಿಜನ, ವಕೀಲರಾದ ಮೈಲಾರಪ್ಪ ದುರಗಪ್ಪ ಹರಿಜನ ಆಗ್ರಹಿಸಿದರು.

### ಹಿಂದೂ ಸಂಘಟನೆಗಳ ಧುರೀಣ ರಾಜೂ ಖಾನಪ್ಪನವರ ಆರೋಪ

# ಬಸವ ಸಂಸ್ಕೃತಿ ಅಭಿಯಾನ ಯಾವ ಸಾಧನೆಗೆ?

**■ವಿಜಯಸಾಕ್ಷಿ ಸುದ್ದಿ, ಗದಗ**

ಲಿಂಗಾಯತ ಮಠಾಧಿಪತಿಗಳು ಶಿಕ್ಷಣ ಸಂಸ್ಥೆಗಳ ಹೆಸರಿನಲ್ಲಿ ನಡೆಸುತ್ತಿರುವ ವ್ಯಾಪಾರೀಕರಣದ ಬಗ್ಗೆ ಸಮಾಜಕ್ಕೆ ಸ್ಪಷ್ಟನೆ ನೀಡುವಂತೆ ಹಿಂದೂ ಸಂಘಟನೆಗಳ ಧುರೀಣ ರಾಜೂ ಖಾನಪ್ಪನವರ ಆಗ್ರಹಿಸಿದ್ದಾರೆ.

ಈ ಬಗ್ಗೆ ಪ್ರಕಟಣೆ ನೀಡಿರುವ ಅವರು, ಮುಖ್ಯಮಂತ್ರಿ ಸಿದ್ಧರಾಮಯ್ಯನವರೊಂದಿಗೆ ಲಿಂಗಾಯತ ಮಠಾಧಿಪತಿಗಳು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳ ನವೀಕರಣದ ಬಗ್ಗೆ ಮಾಡಿಕೊಂಡಿರುವ ಒಪ್ಪಂದದ ವಿವರಗಳನ್ನು ಸಮಾಜಕ್ಕೆ ಬಹಿರಂಗಪಡಿಸಬೇಕು. ಈ ಶಿಕ್ಷಣ ಸಂಸ್ಥೆಗಳ ಹೆಸರಿನಲ್ಲಿ ಲಿಂಗಾಯತ ಮಠಾಧೀಶರು ಕೋಟ್ಯಾಂತರ ರೂಪಾಯಿಗಳ ವ್ಯವಹಾರ ನಡೆಸುತ್ತಿದ್ದಾರೆ. ರಾಜ್ಯದಲ್ಲಿ ಲಿಂಗಾಯತರನ್ನು ಒಡೆದು ಆಳುವ ಮೂಲಕ ಲಿಂಗಾಯತ ಸಮಾಜವನ್ನು ಛಿದ್ರಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀಡಿರುವ ಗುತ್ತಿಗೆಯ ವಿವರಗಳನ್ನು ಬಹಿರಂಗಪಡಿಸುವಂತೆ ಆಗ್ರಹಿಸಿದ್ದಾರೆ.



ಬಸವ ಸಂಸ್ಕೃತಿ ಅಭಿಯಾನದ ಹೆಸರಿನಲ್ಲಿ ಲಿಂಗಾಯತ ಮಠಾಧಿಪತಿಗಳು ನಡೆಸುತ್ತಿರುವ ಅಭಿಯಾನದಿಂದ ಏನು ಸಾಧಿಸಲು ಪ್ರಯತ್ನಿಸುತ್ತಿದ್ದಾರೆ? ಈ ಹಿಂದೆ ಹಿಂದೂ ಧರ್ಮದ ಭಾಗವಾಗಿರುವ ಲಿಂಗಾಯತ ಪ್ರತ್ಯೇಕ ಧರ್ಮವೆಂದು ಘೋಷಿಸುವಂತೆ ಮಾಡಲು ಹೋಗಿ ಇದೇ ಸಿದ್ಧರಾಮಯ್ಯ ತಕ್ಕ ಶಾಸ್ತಿಗೊಳಗಾಗಿದ್ದಾರೆ. ಅಂದು ಆಗಿರುವ ಮುಖಭಂಗದಿಂದ ಅವಮಾನಿತರಾಗಿರುವ ಸಿದ್ಧರಾಮಯ್ಯ ಮತ್ತೆ ಲಿಂಗಾಯತ ಮಠಾಧಿಪತಿಗಳ ಮೂಲಕ ಹಳೆಯ ಪ್ರಯತ್ನವನ್ನು ಮುಂದುವರೆಸಿದ್ದಾರೆ. ಇದರ ಹಿಂದೆ ಮುಸ್ಲೀಂರು, ಕ್ರಿಶ್ಚಿಯನ್‌ರನ್ನು ಓಲೈಸುವ ಧೂರ್ತತನವಿದೆ. ಇದು ಎಂದಿಗೂ ಯಶಸ್ವಿಯಾಗುವದಿಲ್ಲವೆಂದು ಅವರು ಹೇಳಿದ್ದಾರೆ.

ಕಾಡಸಿದ್ಧೇಶ್ವರ ಶ್ರೀಗಳು ಎತ್ತಿರುವ ಪ್ರಶ್ನೆಗಳಲ್ಲಿ ಯಾವ ಪ್ರಶ್ನೆಗೆ ಲಿಂಗಾಯತ ಮಠಾಧೀಶರಿಗೆ ಉತ್ತರ ನೀಡುವ ತಾಕತ್ತಿದೆ? ಕಾಡಸಿದ್ಧೇಶ್ವರ ಶ್ರೀಗಳು ಪ್ರಶ್ನಿಸಿದ ಮರುದಿನವೇ ವಿಜಯಪೂರ ಜಿಲ್ಲೆ ಪ್ರವೇಶಿಸದಂತೆ ಜಿಲ್ಲಾಧಿಕಾರಿಗಳ ಮೂಲಕ ಆದೇಶ ಮಾಡಿಸಲಾಗಿದೆ. ಮುಖ್ಯಮಂತ್ರಿಗಳ ಅಣತಿಯಿಲ್ಲದೇ ಯಾವದೇ ಜಿಲ್ಲಾಧಿಕಾರಿ ಇಂತಹ ಕ್ರಮಕ್ಕೆ ಮುಂದಾಗುವದು ಸಾಧ್ಯವಿಲ್ಲ. ಲಿಂಗಾಯತ ಮಠಾಧೀಶರ ನಡವಳಿಕೆಯಿಂದ ಬಸವ ಸಂಸ್ಕೃತಿ ಅಭಿಯಾನ ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಕೃಪಾಪೋಷಿತ ನಾಟಕ ಮಂಡಳಿಯೆಂಬುದು ಸ್ಪಷ್ಟವಾಗುತ್ತದೆಯೆಂದು ಹೇಳಿದ್ದಾರೆ.



ಯುವ ನಾಯಕರು, ಗದಗ ಜಿಲ್ಲಾ ಯುವ ಕಾಂಗ್ರೆಸ್‌ನ ಅಧ್ಯಕ್ಷರಾದ ಕೃಷ್ಣಗೌಡ ಪಾಟೀಲರು ಹೈದರಾಬಾದನಲ್ಲಿ ನಡೆದ ಪ್ರೈಮ್ ವಾಲಿಬಾಲ್ ಲೀಗ್‌ನ 21ನೇ ಪಂದ್ಯವಾದ ಗೋವಾ-ಕೋಲ್ಕತ್ತಾ ತಂಡದ ಪಂದ್ಯದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿದ್ದರು. ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾಗಿದ್ದುಕೊಂಡು ರಾಜ್ಯದ ಬೇರೆ ಜಿಲ್ಲೆಗಳಲ್ಲಿ ಹಾಗೂ ಬೇರೆ ರಾಜ್ಯಗಳಲ್ಲಿ ಪ್ರಖ್ಯಾತಿ ಪಡೆಯುತ್ತಿರುವದು ಯುವ ಸಂಘಟಕರಿಗೆ ಸ್ಫೂರ್ತಿಯಾಗಿದೆ. ಅವರು ಇನ್ನೂ ಉನ್ನತ ಸ್ಥಾನಕ್ಕೇರಲಿ ಎಂದು ಗದಗ-ಬೆಟಗೇರಿ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಅನ್ವರ್ ನದಾಫ್, ಅಭಿಷಯ್ ಮುಂತಾದ ಯುವ ಸಂಘಟಕರು ಆಶಿಸಿದ್ದಾರೆ.

### ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ; 12ನೇ ದಿನದತ್ತ ಅಹೋರಾತ್ರಿ ಧರಣಿ

# 'ದಂಡ ಚಳುವಳಿ'ಯೊಂದಿಗೆ ಪ್ರತಿಭಟಿಸಿದ ಬಂಜಾರರು



**■ವಿಜಯಸಾಕ್ಷಿ ಸುದ್ದಿ, ಗದಗ**

ಪರಿಶಿಷ್ಟ ಜಾತಿಗಳಲ್ಲಿನ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣದ ವಿರುದ್ಧವಾಗಿ ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಹಾಗೂ ಜಿಲ್ಲಾ ಬಂಜಾರ ಸಮುದಾಯದ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಗರದ ಗಾಂಧಿ ವೃತ್ತದಲ್ಲಿ ನಡೆಯುತ್ತಿರುವ ಬೃಹತ್ ಪ್ರತಿಭಟನೆ ಹಾಗೂ ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ ಶುಕ್ರವಾರದಂದು 12ನೇ ದಿನಕ್ಕೆ ತಲುಪಿದೆ.

ಗುರುವಾರ ಜಿಲ್ಲೆಯ 72 ತಾಂಡಾಗಳ ಪೈಕಿ ನಿಗದಿತ ವೇಳಾಪಟ್ಟಿಯಂತೆ ಸೇವಾಲಾಲ್ ನಗರ, ಹುಲಕೋಟಿ, ಜಾಲವಾಡಗಿ, ಶೇಟ್ಟಿಗೇರೆ, ನೀಲೋಗಲ್, ದೋಡ್ಡೂರ, ನೆಲ್ಲೂರ ತಾಂಡಾಗಳ ಬಂಜಾರರು ಧರಣಿ ಸ್ಥಳಕ್ಕೆ ಆಗಮಿಸಿ ಪ್ರತಿಭಟನೆಯಲ್ಲಿ ಭಾಗವಹಿಸಿದರು.

ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳ ಕಚೇರಿ ಎದುರು ಹೋಳಿ ಹಬ್ಬದ ಲೈಂಗಿ ಪದಗಳನ್ನು ಹಾಡುತ್ತಾ, ಕೈಯಲ್ಲಿ ಕೊಲುಗಳನ್ನು ಹಿಡಿದು ನೃತ್ಯ ಮಾಡುತ್ತಾ, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ದಂಡ ಚಳುವಳಿ ಮಾಡುವ ಮೂಲಕ ಒಳಮೀಸಲಾತಿ ವರ್ಗೀಕರಣದಲ್ಲಿ ಸರ್ಕಾರ ತಾರತಮ್ಯ ತೋರಿದ್ದು, ಬಂಜಾರ ಸಮುದಾಯದ ಮೇಲೆ ಘೋರ ಅನ್ಯಾಯ ಮಾಡಿದೆ ಎಂದು ಖಂಡಿಸಿದರು.

ಈ ವೇಳೆ ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ರವಿಕಾಂತ್ ಅಂಗಡಿ ಮಾತನಾಡಿ, ಸತತ 12 ದಿನಗಳಿಂದ ಜಿಲ್ಲೆಯ 72 ತಾಂಡಾಗಳ ನಾಯಕರು, ಡಾವ್, ಕಾರಭಾರಿ, ಪಂಚರ ಸಮ್ಮುಖದಲ್ಲಿ ಈ ಅಹೋರಾತ್ರಿ ಧರಣಿಗೆ ಕುಳಿತಿದ್ದೇವೆ. ಇತ್ತ ಗಮನ ಹರಿಸದ ಸಚಿವರು, ಸರ್ಕಾರ ದಮನಿತರ ನೋವುಗಳನ್ನು ಹತ್ತಿಕ್ಕುತ್ತಿದೆ. ಈ ಸರ್ಕಾರ ನಮ್ಮ ಸಮಾಜಕ್ಕೆ ನ್ಯಾಯ ದೊರಕಿಸಿಕೊಡದೆ ಇದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡುವ ಮೂಲಕ ಸರ್ಕಾರಕ್ಕೆ ತಕ್ಕ ಪಾಠ ಕಲಿಸುವುದಂತು ಖಚಿತ ಎಂದು ಹೇಳಿದರು. ಈ ಸಂದರ್ಭದಲ್ಲಿ ಡಿ.ಎಲ್. ನಾಯಕ, ಜಿ.ಆರ್. ಪೂಜಾರ್, ಎಚ್.ಡಿ. ಲಮಾಣಿ, ಎಸ್.ಎಂ. ನಾಯಕ್, ಕೆ.ಎಸ್. ಲಮಾಣಿ, ಸಂಗಪ್ಪ ನಾಯಕ್, ಸೋಮಪ್ಪ ಲಮಾಣಿ, ಶಿವಪುತ್ರಪ್ಪ ನಾಯಕ್, ರಾಮಪ್ಪ ನಾಯಕ್, ಚಂದು ನಾಯಕ್, ಶಿವಪ್ಪ ನಾಯಕ್, ವೀರಪ್ಪ ನಾಯಕ, ಭೀಮಪ್ಪ ಲಮಾಣಿ, ಕೃಷ್ಣಪ್ಪ ಲಮಾಣಿ, ನೂರಪ್ಪ ನಾಯಕ, ಕೇಶಪ್ಪ ನಾಯಕ್, ಬೋಜಪ್ಪ ಲಮಾಣಿ, ಡಿ.ಡಿ. ಪೂಜಾರಿ, ಬಾಲು ರಾಠೋಡ್, ರವಿ ಲಮಾಣಿ, ಭೀಮಪ್ಪ ಲಮಾಣಿ, ತುಕಪ್ಪ ನಾಯಕ, ರಾಜು ನಾಯಕ, ಧನ್ನುರಾಮ ತಂಬೂರಿ, ಐ.ಎಸ್. ಪೂಜಾರ್, ಲಕ್ಷ್ಮಣ್ ಜಾದವ್, ಕುಬೇರಪ್ಪ ಪವಾರ್, ಸಂತೋಷ್ ಪವಾರ್, ಸಂತೋಷ್ ಲಮಾಣಿ, ಸೋಮಪ್ಪ ಪೂಜಾರಿ, ಪರಮೇಶ ಲಮಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಶುಕ್ರವಾರ ಜಿಲ್ಲೆಯ 72 ತಾಂಡಾಗಳ ನಾಯಕರು, ಡಾವ್, ಕಾರಭಾರಿ, ಪಂಚರು ಹಾಗೂ ಸಮುದಾಯದ ರಾಜ್ಯದ ಹಲವಾರು ಸಮಾಜದ ರಾಜಕೀಯ ನಾಯಕರು, ವಿವಿಧ ಸಂಘಟನೆಯ ಮುಖಂಡರು, ಸಮಾಜ ಬಾಂಧವರೂ ಸೇರಲಿದ್ದಾರೆ. ಜಿಲ್ಲಾಡಳಿತದ ಎದುರು 'ಗೋರ್ ಬಂಜಾರ ನಸಾಭ ಮಹಾ ಪಂಚಾಯತ್' ಬಂಜಾರರ ಬಹಿರಂಗ ಸಮಾವೇಶ ನಡೆಸುವ ಮೂಲಕ ಮುಂದಿನ ಹೋರಾಟದ ರೂಪುರೇಷೆಗಳನ್ನು ತೀರ್ಮಾನಿಸಲಿದ್ದೇವೆ.
>
> **- ರವಿಕಾಂತ್ ಅಂಗಡಿ,**
> ರಾಜ್ಯ ಪ್ರಧಾನ ಕಾರ್ಯದರ್ಶಿ,
> ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ.

## ಬೀದಿ ಬದಿ ವ್ಯಾಪಾರಸ್ಥರಿಂದ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ಬೀದಿ ಬದಿ ವ್ಯಾಪಾರಸ್ಥರಿಗೆ ಸಂಬಂಧಿಸಿದಂತೆ ತಾತ್ಕಾಲಿಕ ಪಟ್ಟಣ ಮಾರಾಟ ಸಮಿತಿ (Provisional Town Vending committee)ಯನ್ನು ರಚಿಸಲು ಅವಶ್ಯ ಇರುವದರಿಂದ ಸಮಿತಿಯನ್ನು ರಚನೆಗಾಗಿ ದಿನಾಂಕಃ-17-10-2025 ರಂದು ಬೆಳಿಗ್ಗೆ 10-30 ಗಂಟೆಗೆ ನಗರಸಭೆ ಪದವಿ ಪೂರ್ವ ಕಾಲೇಜನಲ್ಲಿ ಆಯ್ಕೆ ಪ್ರಕ್ರಿಯೆ ಕಾರ್ಯ ಕೈಗೊಳ್ಳಲಾಗಿದೆ.

ಈ ಸಮಿತಿ ರಚನೆ ಕಾರ್ಯದಲ್ಲಿ ಅರ್ಹ ಇರುವ ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಬೀದಿ ಬದಿ ವ್ಯಾಪಾರಸ್ಥರು ಆಧಾರ್ ಕಾರ್ಡ್, ಮತ್ತು ಬೀದಿ ಬದಿ ವ್ಯಾಪಾರಸ್ಥರ ಗುರುತಿನ ಚೀಟಿಯೊಂದಿಗೆ ಹಾಜರಾಗಿ ಸಮಿತಿ ರಚಿಸಲು ಸಹಕರಿಸುವಂತೆ ಈ ಮೂಲಕ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಡೇ-ನಲ್ಮ ವಿಭಾಗ ನಗರಸಭೆ ಗದಗ-ಬೆಟಗೇರಿ ಕಾರ್ಯಾಲಯದಲ್ಲಿ ಸಂಪರ್ಕಿಸಲು ಕೋರಿದೆ.

## ಸಾರ್ವಜನಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ 110 ಕೆ.ವ್ಹಿ. ಸಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರದಿಂದ ಕೂಡ್ಲಿಗಿ ತಾಲೂಕಿನ 74 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ 18000 ಕೆವಿ ಸ್ಥಾವರಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸಲು ವಿದ್ಯುತ್ ಮಾರ್ಗವನ್ನು 5.6 ಕಿ.ಮೀ ದೂರದವರೆಗೆ ನಿರ್ಮಿಸುವ ಕಾಮಗಾರಿ ಪೂರ್ಣಗೊಂಡಿದ್ದು, ಈ ವಿದ್ಯುತ್ ಮಾರ್ಗವು ಗದಗ ಜಿಲ್ಲೆ ಮುಂಡರಗಿ ತಾಲೂಕಿನ ಸಿಂಗಟಾಲೂರು, ಹಮ್ಮಿಗಿ ಮತ್ತು ವಿಜಯನಗರ ಜಿಲ್ಲೆ ಹೂವಿನ ಹಡಗಲಿ ತಾಲೂಕಿನ ರಾಜವಾಳ ಗ್ರಾಮಗಳ ಮುಖಾಂತರ ಸರಹದ್ದಿನಲ್ಲಿ ಹಾದು ಹೋಗುತ್ತದೆ. ಇದನ್ನು ದಿ. 17-10-2025 ರಂದು ಅಥವಾ ತದನಂತರ ಕಾರ್ಯಗತಗೊಳಿಸಲಾಗುವುದು.

ಸಾರ್ವಜನಿಕರು ಈ ವಿದ್ಯುತ್ ಮಾರ್ಗದಿಂದ ದೂರವಿರಬೇಕಾಗಿ ಕೋರಲಾಗಿದೆ. ದನ-ಕರುಗಳನ್ನು ವಿದ್ಯುತ್ ಗೋಪುರಗಳಿಗೆ ಕಟ್ಟುವುದಾಗಲಿ, ಮಾರ್ಗದ ಮೇಲೆ ಹಸಿ ದಂಟು-ತಂತಿಯನ್ನು ಎಸೆಯುವುದಾಗಲಿ ಗೋಪುರಗಳ ಮೇಲೆ ಹತ್ತುವುದಾಗಲಿ ಮಾಡಬಾರದು. ಒಂದು ವೇಳೆ ಮೇಲಿನ ಕಾರಣಗಳಿಂದ ವಿದ್ಯುತ್ ಅಪಘಾತಕ್ಕೆ ಒಳಪಟ್ಟರೆ ಕ.ನೀ.ನಿ.ನಿಯಮಿತವು/ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಜವಾಬ್ದಾರಿಯಲ್ಲ ಎಂದು ಕರ್ನಾಟಕ ನೀರಾವರಿ ನಿಗಮ ನಿಯಮಿತದ ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka